ಸಂಪುಟ 01 । ಸಂಚಿಕೆ 161 । ಮಂಗಳವಾರ 05 ಮೇ 2026 । ಪುಟ 4 । ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1) ಕನ್ನಡ ಸಾಹಿತ್ಯ ಪರಿಷತ್ ಸಂಸ್ಥಾಪನಾ ದಿನಾಚರಣೆ**

ಕನ್ನಡ ಸಾಹಿತ್ಯ ಪರಿಷತ್ ಸಂಸ್ಥಾಪನಾ ದಿನಾಚರಣೆಯನ್ನು ಪ್ರತಿವರ್ಷ ಮೇ 5 ರಂದು ಆಚರಿಸಲಾಗುತ್ತದೆ. 1915 ರಲ್ಲಿ ಸ್ಥಾಪಿತವಾದ ಈ ಪರಿಷತ್ತು, ಕನ್ನಡ ಭಾಷೆ, ಸಾಹಿತ್ಯ ಮತ್ತು ಸಂಸ್ಕೃತಿಯ ಉನ್ನತಿಗಾಗಿ ಕಾರ್ಯನಿರ್ವಹಿಸುತ್ತಿದೆ. 2026 ರಲ್ಲಿ, ಪರಿಷತ್ತಿನ 112ನೇ ಸಂಸ್ಥಾಪನಾ ದಿನವನ್ನು ಹರಿಹರ ಮತ್ತು ಕಲ್ಬುರ್ಗಿ ಸೇರಿದಂತೆ ರಾಜ್ಯದಾದ್ಯಂತ ವಿವಿಧ ಜಿಲ್ಲಾ/ತಾಲ್ಲೂಕು ಘಟಕಗಳಲ್ಲಿ ಸಂಭ್ರಮದಿಂದ ಆಚರಿಸಲಾಗುತ್ತಿದೆ.

**2) ವಿಶ್ವ ಆಸ್ತಮಾ ದಿನ**

ವಿಶ್ವದಲ್ಲಿ ಆಸ್ತಮಾದ ಬಗ್ಗೆ ಜಾಗೃತಿ ಮತ್ತು ಕಾಳಜಿಯನ್ನು ಹರಡಲು ಪ್ರತಿ ವರ್ಷ ಮೇ ಮೊದಲ ಮಂಗಳವಾರ ವಿಶ್ವ ಆಸ್ತಮಾ ದಿನವನ್ನು ಆಚರಿಸಲಾಗುತ್ತದೆ. ಗ್ಲೋಬಲ್ ಇನಿಶಿಯೇಟಿವ್ ಫಾರ್ ಆಸ್ತಮಾದಿಂದ ವಾರ್ಷಿಕ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತದೆ. ಆಸ್ತಮಾವು ಬ್ರಾಂಕೈಟಿಸ್‌ನ ದೀರ್ಘಕಾಲದ ಉರಿಯೂತವಾಗಿದ್ದು, ಇದು ಕೆಮ್ಮು, ಉಸಿರಾಟದ ತೊಂದರೆ, ಎದೆಯ ಬಿಗಿತ ಇತ್ಯಾದಿಗಳಿಗೆ ಕಾರಣವಾಗುತ್ತದೆ.

## ಸುಭಾಷಿತ

ನಿಮಗಾಗಿ ಏನನ್ನೂ ಬಯಸಬೇಡಿ, ಎಲ್ಲವನ್ನೂ ಇತರರಿಗಾಗಿ ಮಾಡಿ, ಭಗವಂತನಲ್ಲೇ ಇರುವುದು ಅವನಲ್ಲೇ ಬಾಳುವುದು, ಚಲಿಸುವುದು ಎಂದರೆ ಇದೇ

–ಸ್ವಾಮಿ ವಿವೇಕಾನಂದ

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಪಂಚ ರಾಜ್ಯಗಳ ಚುನಾವಣೆಯಲ್ಲಿ ನಾಯಕತ್ವ ಕೊರತೆಯಿಂದ ಕಂಗೆಟ್ಟ ಕಾಂಗ್ರೆಸ್



**ಬೆಂಗಳೂರು:** ಪಂಚ ರಾಜ್ಯಗಳ ಚುನಾ ವಣೆಯಲ್ಲಿ ಕೇರಳ ಹೊರತುಪಡಿಸಿ ಉಳಿದೆಲ್ಲಾ ಕಡೆ ಕಾಂಗ್ರೆಸ್ ಮಕಾಡೆ ಮಲಗಿದ್ದು, ನಾಯಕತ್ವದ ಕೊರತೆ ಮತ್ತೊಮ್ಮೆ ಪಕ್ಷವನ್ನು ಕಂಗೆಡುವಂತೆ ಮಾಡಿದೆ. ಪಂಚ ರಾಜ್ಯಗಳ ಚುನಾವಣೆ ಪೈಕಿ ರಾಹುಲ್ ಗಾಂಧಿ ಪಶ್ಚಿಮಬಂಗಾಳ ರಾಜ್ಯದ ಮೇಲೆ ಹೆಚ್ಚು ಗಮನ ಕೇಂದ್ರೀಕರಿಸಿದ್ದರು. ಯಾವುದೇ ಪಕ್ಷದ ಜೊತೆ ಮೈತ್ರಿ ಇಲ್ಲದೇ ಸ್ವತಂತ್ರ್ಯವಾಗಿ ಕಾಂಗ್ರೆಸ್ ಕಣದಲ್ಲಿತ್ತು. ಆದರೆ ಪಶ್ಚಿಮ ಬಂಗಾಳದಲ್ಲಿ ನಿರೀಕ್ಷಿತ ಸಾಧನೆ ಮಾಡುವಲ್ಲಿ ಕಾಂಗ್ರೆಸ್ ಹಿನ್ನೆಡೆ ಅನುಭವಿಸಿದೆ.

ಇತ್ತ ಕೇರಳ, ತಮಿಳುನಾಡಿನಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಜವಾಬ್ದಾರಿ ವಹಿಸಿಕೊಂಡಿದ್ದರು. ಕೇರಳದಲ್ಲಿ ಎಲ್‌ಡಿಎಫ್‌ನ ಮೈತ್ರಿ ಕೂಟದ ಸರ್ಕಾರ ಆಡಳಿತ ವಿರೋಧಿ ಅಲೆ ಕಾಡಿದ್ದು, ಕಾಂಗ್ರೆಸ್ ನೇತೃತ್ವದ ಯುಡಿಎಫ್‌ಗೆ ರಾಜಕೀಯ ಲಾಭ ಮಾಡಿಕೊಟ್ಟಿದೆ. ತಮಿಳುನಾಡಿನಲ್ಲಿ ಮತ್ತೆ ಅಧಿಕಾರಕ್ಕೆ ಮರಳುವ ಭಾರಿ ವಿಶ್ವಾಸದಲ್ಲಿದ್ದ ಡಿಎಂಕೆ ಮತ್ತು ಕಾಂಗ್ರೆಸ್ ಮೈತ್ರಿ ಕೂಟಕ್ಕೆ ನಟ ವಿಜಯ್ ಅವರ ಟಿವಿಕೆ ಪಕ್ಷ ಪೆಟ್ಟು ನೀಡಿದೆ. ಸ್ವತಂತ್ರ್ಯವಾಗಿ ಸ್ಪರ್ಧಿಸಿದ್ದ ಟಿವಿಕೆ ಹೆಚ್ಚು ಸ್ಥಾನಗಳಲ್ಲಿ ಗೆಲ್ಲುವ ಮೂಲಕ ಹಳೆಯ ಪಕ್ಷಗಳಾದ ಎಐಎಡಿಎಂಕೆ ಮತ್ತು ಡಿಎಂಕೆಗೆ ಠಕ್ಕರ್ ನೀಡಿದೆ. ಅಸ್ಸಾಂನಲ್ಲಿ ಬಿಜೆಪಿ ಆಡಳಿತ ವಿರೋಧಿ ಅಲೆಯನ್ನು ಮೆಟ್ಟಿ ಮತ್ತೆ ಅಧಿಕಾರ ಹಿಡಿಯುತ್ತಿದೆ. ಪುದುಚೇರಿಯಲ್ಲಿ ಬಿಜೆಪಿ ನೇತೃತ್ವದ ಮೈತ್ರಿ ಕೂಟ ಭರ್ಜರಿ ಗೆಲುವು ಸಾಧಿಸುತ್ತಿದೆ.

ಕಾಂಗ್ರೆಸ್‌ನಲ್ಲಿ ಮತದಾರರನ್ನು ಸೆಳೆಯುವ ಗಟ್ಟಿ ನಾಯಕತ್ವದ ಕೊರತೆ ಕಳೆದ ದಶಕದಿಂದಲೂ ತೀವ್ರವಾಗಿ ಕಾಡಲಾರಂಭಿಸಿದೆ. ಕಳೆದ ವಿಧಾನಸಭೆಗಳ ಚುನಾವಣೆಗಳ ಪೈಕಿ ಕರ್ನಾಟಕ, ತೆಲಂಗಾಣ, ಹಿಮಾಚಲ ಪ್ರದೇಶಗಳಲ್ಲಿ ಕಾಂಗ್ರೆಸ್ ಅಧಿಕಾರದಲ್ಲಿದೆ. ಜಾರ್ಖಂಡ್‌ನಲ್ಲಿ ಇಂಡಿ ಕೂಟ ಅಧಿಕಾರದಲ್ಲಿದ್ದು ಜಾರ್ಖಂಡ್ ಮುಕ್ತಿಮೋರ್ಚ ಮತ್ತು ಕಾಂಗ್ರೆಸ್ ಪಕ್ಷಗಳು ಆಡಳಿತದಲ್ಲಿ ಸಹಭಾಗಿಗಳಾಗಿವೆ. ಬಿಜೆಪಿ, ಅರುಣಾಚಲ ಪ್ರದೇಶ, ಅಸ್ಸಾಂ, ಬಿಹಾರ್, ಛತ್ತೀಸ್‌ಘಡ, ಗೋವಾ, ಗುಜರಾತ್, ಹರಿಯಾಣ, ಮಧ್ಯಪ್ರದೇಶ್, ಮಹಾರಾಷ್ಟ್ರ, ದೆಹಲಿ, ಮಣಿಪುರ, ರಾಜಸ್ತಾನ್, ತ್ರಿಪುರ, ಉತ್ತರಾಖಂಡ್, ಉತ್ತರಪ್ರದೇಶದಲ್ಲಿ ಕೆಲವೆಡೆ ಸ್ವತಂತ್ರವಾಗಿ ಇನ್ನೂ ಕೆಲವಡೆ ಮಿತ್ರ ಪಕ್ಷಗಳೊಂದಿಗೆ ಅಧಿಕಾರ ಹಂಚಿಕೊಂಡಿದೆ. ಉಳಿದಂತೆ ಪಶ್ಚಿಮಬಂಗಾಲದಲ್ಲಿ ಟಿಎಂಸಿ ಪ್ರಾಬಲ್ಯಕ್ಕೆ ಪೆಟ್ಟು ಬಿದ್ದಿದ್ದು, ಇದೇ ಮೊದಲ ಬಾರಿಗೆ ಬಿಜೆಪಿ ತನ್ನ ಕೇಸರಿ ಧ್ವಜವನ್ನು ಹಾರಿಸುತ್ತಿದೆ. ಪ್ರಮುಖವಾದ ರಾಜ್ಯವನ್ನು ಕಳೆದುಕೊಳ್ಳುವ ಮೂಲಕ ಟಿಎಂಸಿಗಷ್ಟೇ ಅಲ್ಲ, ಇಂಡಿ ಮೈತ್ರಿಕೂಟಕ್ಕೂ ಭಾರಿ ಹಾನಿಯಾಗಿದೆ. 2011 ರಿಂದಲೂ ನಿರಂತರವಾಗಿ ಸುಮಾರು 15 ವರ್ಷ ಆಡಳಿತ ನಡೆಸಿದ್ದ ಮಮತಾ ಬ್ಯಾನರ್ಜಿ 4ನೇ ಅವಧಿಯಲ್ಲಿ ಎಡವಿದ್ದಾರೆ.

ತಮಿಳುನಾಡಿನಲ್ಲೂ ಕಾಂಗ್ರೆಸ್‌ನ ಮಿತ್ರ ಪಕ್ಷವಾದ ಡಿಎಂಕೆ ಎಡವಟ್ಟು ಮಾಡಿಕೊಂಡಿದೆ. ದಳಪತಿ ವಿಜಯ್ ಅವರ ಪಕ್ಷ ಟಿವಿಕೆ ಭಾರೀ ಪೈಪೋಟಿ ನೀಡಿದೆ. ಬಹಳಷ್ಟು ಕಡೆ ಸ್ಥಳೀಯ ನಾಯಕತ್ವ ಮಾತ್ರ ಕಾಂಗ್ರೆಸ್ ಮೈತ್ರಿ ಕೂಟದ ಕೈ ಹಿಡಿದಿದೆ. ಕಾಂಗ್ರೆಸ್‌ನ ರಾಷ್ಟ್ರೀಯ ನಾಯಕತ್ವ ಎಲ್ಲಾ ಚುನಾವಣೆಗಳಲ್ಲೂ ಸರಣಿ ಸೋಲುಗಳ ಮೂಲಕ ಮುಖ ಭಂಗ ಅನುಭವಿಸುತ್ತಿದೆ.

# ವರ್ಷಗಳೇ ಕಳೆದರು ಅಧಿಕಾರಿಗಳ ನಿರ್ಲಕ್ಷದಿಂದ ದುರಸ್ತಿಯಾಗದ ನೀರಿನ ಘಟಕ





**ನೈಜ್ಯ ದೆಸೆ ನ್ಯೂಸ್**

**ಔರಾದ:** ಗ್ರಾಮೀಣ ಭಾಗದ ಜನರಿಗೆ ಶುದ್ಧ ಕುಡಿಯುವ ನೀರು ಕಲ್ಪಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ಲಕ್ಷಾಂತರ ರೂಪಾಯಿ ವೆಚ್ಚದಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಿದೆ. ಆದರೆ. ಅಧಿಕಾರಿಗಳ ನಿರ್ಲಕ್ಷ ಮತ್ತು ಜನಪ್ರತಿನಿಧಿಗಳ ಇಚ್ಛಾ ಶಕ್ತಿಯ ಕೊರತೆಯಿಂದಾಗಿ ಬಹುತೇಕ ನೀರಿನ ಘಟಕಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿಲ್ಲ.

ಔರಾದ ತಾಲೂಕಿನ ಎಕಲಾರ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಬರುವ ತುಳಜಾಪೂರ ಗ್ರಾಮದಲ್ಲಿ ಅಳವಡಿಸಿದ ನೀರಿನ ಘಟಕವೇ ಸಾಕ್ಷಿಯಾಗಿದೆ. ತುಳಜಾಪೂರ ಗ್ರಾಮದಲ್ಲಿ ಏಳೆಂಟು ವರ್ಷಗಳ ಹಿಂದೆ ನಿರ್ಮಿಸಲಾದ ಶುದ್ಧ ಕುಡಿಯುವ ನೀರಿನ ಘಟಕವು ನಿರ್ವಹಣೆ ಕೊರತೆಯಿಂದ ಹಾಳಾಗಿದೆ. ಸರ್ಕಾರದ ಲಕ್ಷಾಂತರ ಹಣ ಮಣ್ಣು ಪಾಲಾಗಿದೆ. ಯಂತ್ರೋಪಕರಣಗಳು ತುಕ್ಕು ಹಿಡಿದು ಕರಗುತ್ತಿವೆ ಆದರೆ ನಿರ್ವಹಣೆ ಕೊರತೆಯಿಂದ ದುರಸ್ತಿಗೆ ತಲುಪಿದೆ. ಸಮಸ್ಯೆ ಬಗ್ಗೆ ಹಲವು ಸಲ ಅಧಿಕಾರಿಗಳ ಗಮನಕ್ಕೆ ತಂದರೂ ಪ್ರಯೋಜನವಾಗುತ್ತಿಲ್ಲ ಸುಮಾರು ಎರಡುವರಿ ಸಾವಿರಕ್ಕೂ ಅಧಿಕ ಜನಸಂಖ್ಯೆ ಹೊಂದಿರುವ ಈ ಗ್ರಾಮದಲ್ಲಿ ಅಂದಾಜು 2 ನೂರರಷ್ಟು ಮನೆಗಳಿವೆ.

ಘಟಕವು ಪಾಳು ಬಿದ್ದಿರುವುದರಿಂದ ನೀರಿನ ಸಮಸ್ಯೆ ಎದುರಿಸುವಂತಾಗಿದೆ. ಎನ್ನುತ್ತಾರೆ ಗ್ರಾಮದ ಜನರು. ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಗಮನಹರಿಸಿ ಕೂಡಲೇ ಶುದ್ಧ ಕುಡಿಯುವ ನೀರಿನ ಘಟಕ ದುರಸ್ತಿಗೊಳಿಸಿ ಸಮರ್ಪಕವಾಗಿ ಶುದ್ಧ ಕುಡಿಯುವ ನೀರು ಸರಬರಾಜು ಮಾಡಬೇಕೆನ್ನುವುದು ಗ್ರಾಮಸ್ಥರ ಒತ್ತಾಯವಾಗಿದೆ ಸರ್ಕಾರದ ಲಕ್ಷಾಂತರ ಹಣ ಯಾವುದೇ ಪ್ರಯೋಜನಕ್ಕೆ ಬಾರದೆ ವ್ಯರ್ಥವಾಗಿದೆ. ಸಂಬಂಧಪಟ್ಟವರು ಶೀಘ್ರ ಪ್ರಾರಂಭಿಸದಿದ್ದರೆ ಗ್ರಾಮ ಪಂಚಾಯಿತಿಗೆ ಮುತ್ತಿಗೆ ಹಾಕಿ ಪ್ರತಿಭಟಿಸಲಾಗುವುದು ಎಂದು ತುಳಜಾಪೂರ ಗ್ರಾಮಸ್ಥರು ತಿಳಿಸಿದ್ದಾರೆ.

# ಲಿಂಗಸುಗೂರು: ಜಿಟಿಟಿಸಿ ಪ್ರವೇಶಕ್ಕೆ ಅರ್ಜಿ ಆಹ್ವಾನ



**ನೈಜ್ಯ ದೆಸೆ ನ್ಯೂಸ್**

**ರಾಯಚೂರು:** ಜಿಲ್ಲೆಯ ಲಿಂಗಸುಗೂರಿನ ಕರಡಕಲ್ ರಸ್ತೆಯ ಬಳಿ ಸ್ಥಾಪಿತವಾಗಿರುವ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (ಜಿಟಿಟಿಸಿ)ದ ವತಿಯಿಂದ 2026–27ನೇ ಸಾಲಿನಲ್ಲಿ ವಿವಿಧ ಕೋರ್ಸ್‌ಗಳ ಪ್ರವೇಶಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಕರ್ನಾಟಕ ಸರ್ಕಾರದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರದ ಸ್ವಾಯತ್ತ ಸಂಸ್ಥೆಯಾಗಿದ್ದು, ಈ ಭಾಗದಲ್ಲಿನ ಪ್ರತಿಷ್ಠಿತ ತಾಂತ್ರಿಕ ವಿದ್ಯಾಸಂಸ್ಥೆಗಳಲ್ಲಿ ಒಂದಾಗಿದೆ. ನಮ್ಮ ಸಂಸ್ಥೆಯಿಂದ ನಡೆಸಲ್ಪಡುವ ಡಿಪ್ಲೊಮಾ ಇನ್ ಟೂಲ್ ಅಂಡ್ ಡೈ ಮೇಕಿಂಗ್, ಡಿಪ್ಲೊಮಾ ಇನ್ ಆಟೊಮೇಷನ್ ಅಂಡ್ ರೊಬೊಟಿಕ್ಸ್, ಡಿಪ್ಲೊಮಾ ಇನ್ ಪ್ರಿಸಿಶನ್ ಮ್ಯಾನುಫ್ಯಾಕ್ಚ–ರಿಂಗ್ 3+1ವರ್ಷದ ಕೋರ್ಸ್‌ಗಳ ಪ್ರವೇಶಾತಿಗಾಗಿ ಮೇ.15ರೊಳಗಾಗಿ ಜಿಟಿಟಿಸಿ ವೆಬ್‌ಸೈಟ್: https://gttc.karnataka.gov.in ನಲ್ಲಿ ಅಥವಾ ನೇರವಾಗಿ ಸಂಸ್ಥೆಗೆ ಅಗತ್ಯ ದಾಖಲಾತಿಗಳೊಂದಿಗೆ ಭೇಟಿ ನೀಡಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 9902072101, 8762564872ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಲಿಂಗಸುಗೂರಿನ ಜಿಟಿಟಿಸಿ ಕಾಲೇಜಿನ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದಾವಣಗೆರೆಯಲ್ಲಿ ಸಮರ್ಥ್‌ಗೆ ಗೆಲುವು

**ನೈಜ್ಯ ದೆಸೆ ನ್ಯೂಸ್**



**ದಾವಣಗೆರೆ:** ಕಾಂಗ್ರೆಸ್ ಹಾಗೂ ಪ್ರತಿಪಕ್ಷ ಬಿಜೆಪಿ ನಡುವೆ ತೀವ್ರ ಜಿದ್ದಾಜಿದ್ದಿಗೆ ಕಾರಣವಾಗಿದ್ದ ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ, ಶಾಮನೂರು ಶಿವಶಂಕರಪ್ಪ ಅವರ ಮೊಮ್ಮಗ ಸಮರ್ಥ್ ಶಾಮನೂರು ಕೊನೆಗೂ ಪ್ರಯಾಸದ ಗೆಲುವು ದಾಖಲಿಸಿದ್ದಾರೆ.

ಐದು ರಾಜ್ಯಗಳ ಚುನಾವಣೆ ಫಲಿತಾಂಶದೊಂದಿಗೆ ದಾವಣಗೆರೆ ದಕ್ಷಿಣ ಹಾಗೂ ಬಾಗಲಕೋಟೆ ಉಪ ಚುನಾವಣೆಯ ಫಲಿತಾಂಶ ಸೋಮವಾರ ಪ್ರಕಟವಾಗಿದ್ದು, ಆಡಳಿತರೂಢ ಕಾಂಗ್ರೆಸ್ ಎರಡೂ ಕ್ಷೇತ್ರಗಳಲ್ಲಿ ಗೆದ್ದು ಬೀಗಿದೆ. ತೀವ್ರ ಕುತೂಹಲ ಕೆರಳಿಸಿದ್ದ ದಾವಣಗೆರೆ ದಕ್ಷಿಣದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಶಾಮನೂರು ಅವರು ಬಿಜೆಪಿ ಅಭ್ಯರ್ಥಿ ಶ್ರೀನಿವಾಸ ದಾಸಕರಿಯಪ್ಪ ಅವರ ವಿರುದ್ಧ 4967 ಮತಗಳ ಅಂತರದಿಂದ ಗೆದ್ದಿದ್ದು, 20ನೇ ಸುತ್ತಿನ ಎಣಿಕೆ ಬಳಿಕ ಸಚಿವ ಎಸ್. ಎಸ್. ಮಲ್ಲಿಕಾರ್ಜುನ್ ಅವರ ಬೆಂಬಲಿಗರು ವಿಜಯೋತ್ಸವ ಆಚ–ರಿಸಿದರು.

ಮತದಾನ ಆರಂಭಗೊಂಡ ಮೊದಲ 6 ಸುತ್ತಿನಲ್ಲಿಯೂ ಸಮರ್ಥ್ ಶಾಮನೂರು ಹಿನ್ನಡೆ ಕಾಯ್ದುಕೊಂಡಿದ್ದು, 7ನೇ ಸುತ್ತಿನಲ್ಲೂ ಬಿಜೆಪಿ ಅಭ್ಯರ್ಥಿ ಶ್ರೀನಿವಾಸ ದಾಸಕರಿಯಪ್ಪ ಮುನ್ನಡೆಯಲ್ಲಿದ್ದರು. ಆದರೆ 8 ಹಾಗೂ 9ನೇ ಸುತ್ತಿನಲ್ಲಿ ಅಂಕಿ–ಸಂಖ್ಯೆ ಉಲ್ಟಾ

# ಹಾಳಜಾಡಲದಿನ್ನಿ ಗ್ರಾಮದಲ್ಲಿ ಗೈರಾಣಿ ಭೂಮಿ ಹೊತ್ತುವರಿ ತಡೆದು ಸರ್ಕಾರಿ ಶಾಲೆಗೆ ಭೂಮಿ ಕೊಡಿ: ಮಹಾಲಿಂಗ ದೊಡ್ಡಮನಿ

**ನೈಜ್ಯ ದೆಸೆ ನ್ಯೂಸ್**

**ಅರಕೇರಿ:** ತಾಲೂಕಿನ ಹಾಳಜಾಡಲದಿನ್ನಿ ಗ್ರಾಮದಲ್ಲಿ ಗೈರಾಣಿ ಭೂಮಿ ಹೊತ್ತುವರಿ ಆಗಿದ್ದು ಕೂಡಲೇ ತಹಸೀಲ್ದಾರ್ ಭೇಟಿ ನೀಡಿ ಭೂಮಿಯನ್ನು ಅಧ್ವಸ್ತ ಮಾಡಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಸರ್ಕಾರಿ ಗೈರಾಣಿ ಭೂಮಿಯನ್ನು ಮಂಜೂರು ಮಾಡುವಂತೆ ಭಾರತ ವಿದ್ಯಾರ್ಥಿ ಫೆಡರೇಷನ್ (SFI) ದೇವದುರ್ಗ ತಾಲೂಕು ಸಮಿತಿ ಹಾಗೂ ಭಾರತ ಪ್ರಜಾಸತ್ತಾತ್ಮಕ ಯುವಜನ ಫೆಡರೇಷನ್ ಡಿವೈಎಫ್‌ಐ ಹಾಳಜಾಡಲದಿನ್ನಿ ಗ್ರಾಮ ಸಮಿತಿಯ ಮುಖಂಡರು ಸೋಮವಾರ ಅರಕೇರಿ ತಹಸೀಲ್ದಾರ್ ಅವರಿಗೆ ಮನವಿ ಪತ್ರ ಸಲ್ಲಿಸಿ ಒತ್ತಾಯಿಸಿದ್ದಾರೆ.

ಎಸ್ ಎಫ್ ಐ ತಾಲೂಕು ಅಧ್ಯಕ್ಷ ಮಹಾಲಿಂಗ ದೊಡ್ಡಮನಿ ಮಾತನಾಡಿ



ಹಾಳಜಾಡಲದಿನ್ನಿ ಗ್ರಾಮದಲ್ಲಿರುವ ಈ ಶಾಲೆಯಲ್ಲಿ ಐಎಲು ಯಿಂದ 7ನೇ ತರಗತಿ ವರೆಗೆ ಸುಮಾರು 180ಕ್ಕೂ ಹೆಚ್ಚು ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದು, ಪ್ರಸ್ತುತ ಹಳೆಯ ಮತ್ತು ಅಪಾಯಕರ ಕಟ್ಟಡದಲ್ಲೇ ತರಗತಿಗಳು ನಡೆಯುತ್ತಿವೆ. ಶಾಲೆಗೆ ಯಾವುದೇ ತಡೆಗೋಡೆ ಇಲ್ಲದೆ ಇರುವುದರಿಂದ ಮಕ್ಕಳು ನೇರವಾಗಿ ಮುಖ್ಯ ರಸ್ತೆಗೆ ಸಂಪರ್ಕ ಹೊಂದಿದ್ದು, ಅಪಘಾತ ಸಂಭವಿಸುವ ಭೀತಿ ದಿನೇದಿನೇ ಹೆಚ್ಚುತ್ತಿದೆ ಎಂದು ಸಂಘಟನೆಗಳು ಆತಂಕ ವ್ಯಕ್ತಪಡಿಸಿವೆ.

ಇನ್ನು ಶಾಲೆ ಕಾರ್ಯನಿರ್ವಹಿಸುತ್ತಿರುವ ಜಾಗ ಖಾಸಗಿ ವ್ಯಕ್ತಿಗಳ ಸ್ವತ್ತಾಗಿದ್ದು, ಶಾಲೆಯ ಅಭಿವೃದ್ಧಿಗೆ ಅಗತ್ಯವಾದ ಜಾಗವನ್ನು ನೀಡಲು ಅವರು ನಿರಾಕರಿಸುತ್ತಿದ್ದಾರೆ ಎನ್ನಲಾಗಿದೆ. ಇದ–ರಿಂದ ಶಾಲೆಯ ವಿಸ್ತರಣೆ ಮತ್ತು ಮೂಲಭೂತ ಸೌಲಭ್ಯಗಳ ಅಭಿವೃದ್ಧಿಗೆ ತೊಂದರೆ ಉಂಟಾಗಿದೆ. ಈ ಹಿನ್ನೆಲೆಯಲ್ಲಿ, ಹಾಳಜಾಡಲದಿನ್ನಿ ಗ್ರಾಮದ ಸರ್ವೇ ನಂ. 4, 5, 7, 75ರಲ್ಲಿ ಇರುವ ಸರ್ಕಾರಿ ಗೈರಾಣಿ ಭೂಮಿಯನ್ನು ಶಾಲೆಗೆ ಮಂಜೂರು ಮಾಡಬೇಕು. ಇದರಿಂದ ಹೊಸ ಕಟ್ಟಡ, ತಡೆಗೋಡೆ, ಆಟದ ಮೈದಾನ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ನಿರ್ಮಿಸಲು ಅನುಕೂಲವಾಗಲಿದೆ ಎಂದು ಸಂಘಟನೆಗಳು ಮನವಿ ಮಾಡಿವೆ.

ಮಕ್ಕಳ ಸುರಕ್ಷತೆ ಹಾಗೂ ಉತ್ತಮ ಶಿಕ್ಷಣದ ದೃಷ್ಟಿಯಿಂದ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ವಿದ್ಯಾರ್ಥಿಗಳು ಹಾಗೂ ಪಾಲಕರೊಂದಿಗೆ ಸೇರಿ ಇಲಾಖೆ ಎದುರು ಉಗ್ರವಾದ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಕೆ ನೀಡಿದ್ದಾರೆ. ಇದೆ ಸಂದರ್ಭದಲ್ಲಿ ಎಸ್ ಎಫ್ ಐ ತಾಲೂಕು ಮುಖಂಡ ಸಂತೋಷ ತ್ಯಾಪ್ಲಿ. ಡಿವೈಎಫ್‌ಐ ಹಾಳಜಾಡಲದಿನ್ನಿ ಗ್ರಾಮ ಘಟಕ ಅಧ್ಯಕ್ಷ ಆಂಜನೇಯ. ಕಾರ್ಯದರ್ಶಿ ಚಂದ್ರಶೇಖರ. ಉಪಾಧ್ಯಕ್ಷ ರವಿ. ಆಂಜನೇಯ. ಶಶಿಕುಮಾರ್. ಬಸವರಾಜ ಹನುಮಂತ. ಆಂಜನೇಯ. ಮೌನೇಶ. ಸುರೇಶ್. ಗೋಪಾಲ. ನಾಗರಾಜ. ರಂಗಯ್ಯ. ರಾಮಕೃಷ್ಣ. ಶರಣಬಸವ. ಶಿವಕುಮಾರ್. ಸಿದ್ಧಲಿಂಗ. ರಾಮಸ್ವಾಮಿ. ಚನ್ನಬಸವ. ಸುರೇಶ್ ಹೂಗಾರ. ಮತ್ತು ಇತರರು ಇದ್ದರು.

## ಸಾಹಿತ್ಯ ಸಿಂಚನ

ಪ್ರಯತ್ನ ಪಟ್ರೆನೇ ಪಟ್ಟ

ಸೋತು ಸುಣ್ಣ ಆಗಬೇಡ
ಗೆದ್ದು ಬೀಗಬೇಡ ಗೆಳೆಯ
ಪ್ರಯತ್ನ ಪಟ್ರೆನೆ ಪಟ್ಟ ಸಿಗುತ್ತೆ
ಇದೇ ಬದುಕಿನ ಗುಟ್ಟು

ಬೆಟ್ಟ ಹತ್ತೋಕೆ ಕಷ್ಟ ನಿಜ
ಆದರೆ ನಿಂತರೆ ಶಿಖರ ಸಿಗಲ್ಲ
ಒಂದೊಂದೇ ಹೆಜ್ಜೆ ಇಟ್ಟರೆ
ಆಕಾಶವೂ ಕೈಗೆ ಸಿಗುತ್ತೆ

ನಿನ್ನೆ ಬಿದ್ದ ಕಣ್ಣೀರನ್ನು
ಇವತ್ತು ಬೆವರಾಗಿ ಸುರಿಸು
ನಾಳೆ ಅದೇ ಬೆವರು
ಯಶಸ್ಸಿನ ಹಾರವಾಗುತ್ತೆ

"ಆಗಲ್ಲ" ಅನ್ನೋ ಪದವನ್ನ
ನಿನ್ನ ಜಾತಕದಲ್ಲಿ ಇದ್ದರೆ ಹರಿದು ಹಾಕು
"ಆಗುತ್ತೆ" ಅಂತ ಎದೆ ತಟ್ಟಿ
ಮುನ್ನುಗ್ಗಿ ಸಾಗು

ಎಡಿಸನ್ ಸಾವಿರ ಸಲ ಸೋತ್ರು
ಆದ್ರೆ ಬಲ್ಬ್ ಕಂಡುಹಿಡಿದರು
ಅಂಬೇಡ್ಕರ್ ಕಷ್ಟಪಟ್ಟು ಓದಿದರು
ಸಂವಿಧಾನ ಬರೆದಿಟ್ರು

ನಿನ್ನ ಕೈಯಲ್ಲಿ ಶಕ್ತಿ ಇದೆ
ಮನಸ್ಸಲ್ಲಿ ಕಿಚ್ಚು ಇದೆ
ಪ್ರಯತ್ನ ಒಂದೇ ಮಂತ್ರ
ಪಟ್ಟ ಕಟ್ಟೋದು ನಿಜ
ಪ್ರಯತ್ನಕ್ಕೆ ಸೋಲೇ ಇಲ್ಲ.

ಎಸ್. ದುರಗಪ್ಪ.ಕುಷ್ಟಗಿ

## 2028ರ ಚುನಾವಣೆಗೆ ಮುನ್ನುಡಿ : ಮಾಜಿ ಸಚಿವ ಎಚ್.ಆಂಜನೇಯ ಹೇಳಿಕೆ

ನೈಜ್ಯ ದೆಸೆ ನ್ಯೂಸ್

**ದಾವಣಗೆರೆ: ರಾಜ್ಯದಲ್ಲಿ ನುಡಿದಂತೆ ನಡೆಯುತ್ತಿರುವ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದತ್ತ ಮತದಾರರ ಒಲವು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ ಎಂಬುದಕ್ಕೆ ದಾವಣಗೆರೆ ದಕ್ಷಿಣ, ಬಾಗಲಕೋಟೆ ಉಪ ಚುನಾವಣೆಯಲ್ಲಿನ ಗೆಲುವೇ ಸಾಕ್ಷಿ ಎಂದು ಮಾಜಿ ಸಚಿವ, ಕೆಪಿಸಿಸಿ ಉಪಾಧ್ಯಕ್ಷ ಎಚ್. ಆಂಜನೇಯ ಹೇಳಿದ್ದಾರೆ. ರಾಜ್ಯದ ಎರಡು ಕ್ಷೇತ್ರದಲ್ಲಿ ಪಕ್ಷದ ಅಭ್ಯರ್ಥಿಗಳ ಗೆಲುವು ಸಿದ್ದರಾಮಯ್ಯ ಅವರ ಆಡಳಿತದ ಹಿರಿಮೆಗೆ ಬಹುದೊಡ್ಡ ಗರಿ ಆಗಿದೆ.**



ಗ್ಯಾರೆಂಟಿ ಯೋಜನೆಗಳನ್ನು ಘೋಷಿಸಿದ ಸಂದರ್ಭ ಇದು ಸಾಧ್ಯವೇ ಇಲ್ಲವೆಂದು ಸುದ್ದಿ ಹರಡಿದರು. ಬಳಿಕ ಅನುಷ್ಠಾನಕ್ಕೆ ತರುತ್ತಿದ್ದಂತೆ ರಾಜ್ಯ ದಿವಾಳಿ ಆಗಲಿದೆ ಎಂದು ಬೊಬ್ಬೆ ಹಾಕಿದರು. ಆದರೆ, ದೇಶದಲ್ಲಿಯೇ ಅತ್ಯಂತ ಶಿಸ್ತುಬದ್ಧ ಆರ್ಥಿಕ ಸ್ಥಿತಿಯಲ್ಲಿ ರಾಜ್ಯವೇ ನಂ. 1 ಆಗಿದೆ. ಇದಕ್ಕೆ ಮತದಾರರು ಈಗ ಮುದ್ರೆ ಒತ್ತಿದ್ದಾರೆ ಎಂದಿದ್ದಾರೆ. ಬಾಗಲಕೋಟೆ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ವಿರುದ್ಧ ಎಲ್ಲ ರಾಜಕೀಯ ಶತ್ರುಗಳು ಒಗ್ಗೂಡಿದ್ದರು. ಪಕ್ಷದಿಂದ ಉಚ್ಚಾಟಿಸಿದ್ದ ಯತ್ನಾಳ್ ಅವರನ್ನು ಬಿಜೆಪಿ ಪ್ರಚಾರಕ್ಕೆ ಕರೆತಂದಿತು. ಜಾತಿಗಳ ಮಧ್ಯೆ ಕಂದಕ ಹುಟ್ಟುಹಾಕುವ ಕೆಲಸ ಮಾಡಿತು. ಆದರೆ, ಆ ಕ್ಷೇತ್ರದ ಮತದಾರರು ನಮ್ಮ ನಿರೀಕ್ಷೆಗೂ ಮೀರಿ ಕೈ ಅಭ್ಯರ್ಥಿಯನ್ನು ಹೆಚ್ಚು ಮತಗಳ ಅಂತರದಿಂದ ಗೆಲ್ಲಿಸಿದರು. ಅದೇ ರೀತಿ ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಪಕ್ಷಕ್ಕೆ ನಿಷ್ಠವಾಗಿರುವ ಶಾಮನೂರು ಕುಟುಂಬದ ಕುಡಿ, ವಿದ್ಯಾವಂತ ಯುವಕ ಸಮರ್ಥನನ್ನು ಒಮ್ಮತದಿಂದ ಅಭ್ಯರ್ಥಿಯನ್ನಾಗಿಸಲಾಗಿತ್ತು. ಆದರೆ, ಸದಾ ಮುಸ್ಲಿಮರನ್ನು ಶತ್ರುಗಳಂತೆ ನೋಡುವ ಬಿಜೆಪಿ ನಾಯಕರು ಉರಿಯುವ ಮನೆಯಲ್ಲಿ ಗಳ ಹಿರಿಯುವ ರೀತಿ ಮುಸ್ಲಿಮರಿಗೆ ಟಿಕೆಟ್ ನೀಡದೆ ಕಾಂಗ್ರೆಸ್ ವಂಚಿಸಲಾಗಿದೆ ಎಂದು ದೂರಲು ಆರಂಭಿಸಿದರು. ಒಂದೆಡೆ ಮುಸ್ಲಿಮರನ್ನು ಕೈ ಸರ್ಕಾರದ ತುಷ್ಟಿಕರಣ ಮಾಡಲಾಗುತ್ತಿದೆ ಎಂದು ದೂರುವ ಬಿಜೆಪಿಯವರೇ, ಮತ್ತೊಂದೆಡೆ ಮುಸ್ಲಿಮರನ್ನು ಕಾಂಗ್ರೆಸ್ ವಂಚಿಸುತ್ತಿದೆ, ಕೇವಲ ಮತಬ್ಯಾಂಕ್ ಮಾಡಿಕೊಂಡಿದೆ ಎಂದು ಆರೋಪಿಸಿ, ಕ್ಷೇತ್ರದಲ್ಲಿ ಸುಳ್ಳು ಸುದ್ದಿ ಹರಡಿಸಿದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಅಂಗನವಾಡಿ ಕಾರ್ಯಕರ್ತೆ, ಸಹಾಯಕಿ ಹುದ್ದೆಗಳಿಗೆ ಅರ್ಜಿ ಆಹ್ವಾನ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ರಾಯಚೂರು ವತಿಯಿಂದ 2022-23, 2023-24, 2024-25 ಮತ್ತು 2025-26ನೇ ಸಾಲಿಗೆ ಅಂಗನವಾಡಿ ಕಂ ಕ್ರಷ್‌ಗಳನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಪ್ರಾರಂಭಿಸಲು ಸೂಚಿಸಲಾಗಿದೆ. ಜಿಲ್ಲೆಗೆ ಒಟ್ಟು 60 ಕೇಂದ್ರಗಳು ಮಂಜೂರಾಗಿದ್ದು, ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.**



ಅಂಗನವಾಡಿ ಕಂ ಕ್ರಷ್ ಕೇಂದ್ರಗಳ ಕಾರ್ಯಕರ್ತೆ ಗೌರವಧನ 5,500 ರೂ. ಮತ್ತು ಸಹಾಯಕಿ ಗೌರವಧನ 3,000 ರೂ. ನೀಡಲಾಗುವುದು. ಅಭರ್ಥಿಯು ಸ್ಥಳಿಯ ಅಂಗನವಾಡಿ ಕಂ ಕ್ರಷ್ ಕೇಂದ್ರದ ಸರ್ವೆ ವ್ಯಾಪ್ತಿಯಲ್ಲಿ ವಾಸವಾಗಿರಬೇಕು. ಅರ್ಜಿ ಸಲ್ಲಿಸುವ ಅಭ್ಯರ್ಥಿಯು ಸಂಬಂಧಪಟ್ಟ ಅಂಗನವಾಡಿ ಕೇಂದ್ರದ ವ್ಯಾಪ್ತಿಯಲ್ಲಿ ಅಂಗನವಾಡಿ ಕಾರ್ಯಕರ್ತೆಯಿಂದ ಸರ್ವೆವ್ಯಾಪ್ತಿಯಲ್ಲಿರುವ ಬಗ್ಗೆ ದೃಡೀಕರಣ ಪಡೆದು ಸಲ್ಲಿಸಬೇಕು. ಅಭ್ಯರ್ಥಿಯು ಮಹಿಳೆ ಆಗಿರಬೇಕು. ಕರ್ನಾಟಕ ರಾಜ್ಯ ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ದ್ವಿತೀಯ ಪಿಯುಸಿಯಲ್ಲಿ ತೇರ್ಗಡೆ ಆಗಿರಬೇಕು.

ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು. ಈ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿ ಲಭ್ಯವಿಲ್ಲದೇ ಇದ್ದಲ್ಲಿ ಕರ್ನಾಟಕ ರಾಜ್ಯ ಪ್ರೌಡ ಶಿಕ್ಷಣ ಪರೀಕ್ಷ ಮಂಡಳಿ ನಡೆಸುವ 10ನೇ ತರಗತಿಯಲ್ಲಿ ತೇರ್ಗಡೆ ಆಗಿರುವವರನ್ನು ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರುವವರನ್ನು ಪರಿಗಣಿಸಬಹುದಾಗಿದೆ. ವಯೋಮಿತಿ ಅರ್ಜಿ ಸಲ್ಲಿಸಲು ನೇಮಕಾತಿ ಅಧಿಸೂಚನೆ ಹೊರಡೊಸಿದ ದಿನಾಂಕಕ್ಕೆ ಕನಿಷ್ಠ 18 ವರ್ಷ ಪೂರ್ಣಗೊಂಡಿರಬೇಕು. ಮತ್ತುಗರಿಷ್ಠ 35 ವರ್ಷ ಮೀರಿರಬಾರದು. ವಿಧವೆಯರು ಮತ್ತು ಅಂಗವಿಕಲರಿಗೆ 10 ವರ್ಷ ವಯೋಮಿತಿಯಲ್ಲಿ ರಿಯಾಯಿತಿ ಇರುತ್ತದೆ.

ಅಭ್ಯರ್ಥಿಯು 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ಅಥವಾ ಕನ್ನಡವನ್ನು ಒಂದು ಬಾಷಾ ವಿಷಯವಾಗಿ ಓದಿರಬೇಕು. ಸರ್ಕಾರದಿಂದ ಮಾನ್ಯತೆ ಪಡೆದ ಸಂಸ್ಥೆಯಿಂದ 6 ತಿಂಗಳಿಂದ 6 ವರ್ಷದ ಮಕ್ಕಳ ಪೋಷಣೆ ಮತ್ತು ಶಿಕ್ಷಣಕ್ಕೆ ಸಂಬಂಧಿಸಿದಂತೆ ಕನಿಷ್ಠ 6 ತಿಂಗಳ ಅವಧಿಯ ವಿಷಯವನ್ನು ಅಥವಾ ತರಬೇತಿಯನ್ನು ಪಡೆದಿರಬೇಕು. ರಾಷ್ಟ್ರೀಯ ಶಿಶುಪಾಲನಾ ಕೇಂದ್ರದಲ್ಲಿ ಸೇವೆ ಸಲ್ಲಿಸಿರುವ ಶಿಕ್ಷಕಿ ಹಾಗೂ ಸಹಾಯಕಿ, ವಿಧವೆಯರು, ವಿಷೇಶಚೇತನರು (ಕನಿಷ್ಠಶೇಕಡಾ 40 ಗರಿಷ್ಠ ಶೇಕಡಾ 60 ರಷ್ಟು ವಿಕಲಚೇತನರು ಮಾತ್ರ ಪರಿಗಣಿಸತಕ್ಕದ್ದು,

ಇಲಾಖಾ ಸಂಸ್ಥೆಯ ನಿವಾಸಿಗಳು ದಿನಾಂಕ: 18-05-2026ರವರೆಗೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಸಿಂಧನೂರು, ತುರುವಿಹಾಳ, ಲಿಂಗಸುಗೂರು, ಮಾನವಿ, ದೇವದುರ್ಗ, ಸಿರವಾರ, ಗಿಲ್ಲೇಸುಗೂರು, ಮತ್ತು ರಾಯಚೂರು ಇವರನ್ನು ಕಚೇರಿ ವೇಳೆಯಲ್ಲಿ ಸಂಪರ್ಕ ಮಾಡಬಹುದಾಗಿದೆ ಅಥವಾ ಮೊಬೈಲ್ ಸಂಖ್ಯೆ: 7619281523ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೊಸೂರು ಸಿದ್ದಾಪುರ SSLC PUC ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನ





ನೈಜ್ಯ ದೆಸೆ ನ್ಯೂಸ್

**ಜಾಲಹಳ್ಳಿ: ಅರಕೇರಾ ಬಿಜೆಪಿ ಎಸ್‌ಟಿ ಮೋರ್ಚಾ ಕಾರ್ಯದರ್ಶಿ ರಂಗಪ್ಪ ಜೋಳದಡಗಿ ಅವರ 42ನೇ ಹುಟ್ಟುಹಬ್ಬದ ಪ್ರಯುಕ್ತ, 2026-27ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಶೇಕಡಾ 75% ಹಾಗೂ ಅದಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರಿಗೆ ಸನ್ಮಾನ ಕಾರ್ಯಕ್ರಮವನ್ನು ಹೊಸೂರು ಸಿದ್ದಾಪುರ ಗ್ರಾಮದ ದುರ್ಗಾ ನಗರದಲ್ಲಿ ಹಮ್ಮಿಕೊಳ್ಳಲಾಯಿತು.**

ಈ ಸಂದರ್ಭದಲ್ಲಿ ಮಾತನಾಡಿದ ರಂಗಪ್ಪ ಜೋಳದಡಗಿ ಅವರು, ಗ್ರಾಮೀಣ ಪ್ರದೇಶದ ಮಕ್ಕಳಿಗೆ ಗುಣಾತ್ಮಕ ಶಿಕ್ಷಣ ದೊರೆಯಲಿ ಎಂಬ ಉದ್ದೇಶದಿಂದ ತಮ್ಮ ಹುಟ್ಟುಹಬ್ಬದ ಪ್ರಯುಕ್ತ ಈ ಸನ್ಮಾನ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು. ಸನ್ಮಾನ ಸ್ವೀಕರಿಸಿದ ವಿದ್ಯಾರ್ಥಿಗಳು ಸಂತೋಷ ವ್ಯಕ್ತಪಡಿಸಿ, ಇಂತಹ ಪ್ರೋತ್ಸಾಹವು ತಮ್ಮ ಮುಂದಿನ ಶಿಕ್ಷಣಕ್ಕೆ ಉತ್ತೇಜನ ನೀಡುತ್ತದೆ ಎಂದು ಹೇಳಿದರು. ಈ ಕಾರ್ಯಕ್ರಮದಲ್ಲಿ ಸಾಬಯ್ಯ ಇರಬಗೆರಾ, ಅಯ್ಯಪ್ಪ ಜೋಳದಡಗಿ, ತಿಮ್ಮಣ್ಣ ಬುಂಕಲದೊಡ್ಡಿ, ಸಿದ್ದಣ್ಣ ಕಾವಲಿ, ಮಹೇಂದ್ರ ಕುಮಾರ್ ಲಿಂಗದಹಳ್ಳಿ, ಹನುಮಂತ ಮಂಡಲಗುಡ್ಡ, ಜಯಪ್ಪ ಬೆಲ್ಲದ, ದೇವೇಂದ್ರ ದೇವಿಗುಡಿ, ರಂಗಪ್ಪ ಕಾವಲಿ, ಮುದರಂಗಪ್ಪ ಜಲ್ಲಿ, ಶಿವರಾಜ್ ಜಲ್ಲಿ, ಸೋಮನಾಥ ಕೊತ್ತದೊಡ್ಡಿ, ಮೌನೇಶ್ ಬೆಂಗಾಂಡಿ, ಭೀಮಣ್ಣ ಮುರಾಳ, ನಿಂಗಯ್ಯ ಬುದ್ದಿನ್ನಿ, ನಿಂಗಯ್ಯ ಶರಣಬಸವ ಬೀಳಾರ್, ಶಿವರಾಜ್ ಮಂಡಲಗುಡ್ಡ, ವೆಂಕಟೇಶ್ ಕಾವಲಿ, ತಿರುಪತಿ ಲಿಂಗದಳ್ಳಿ, ಪಿಡ್ಡಪ್ಪ ದೊಡ್ಡಮನಿ, ಶಿವರಾಜ್ ಕಾವಲಿ, ಶರಣಬಸವ ಕಾವಲಿ, ರಂಗಯ್ಯ ಜಲ್ಲಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.


**ವರದಿ ಖಾಜಾ ಹುಸೇನ್ ಬಾಬಾ ಜಾಲಹಳ್ಳಿ**

# ಶೃಂಗೇರಿ ವಿಧಾನಸಭಾ ಕ್ಷೇತ್ರ ಅಂಚೆ ಮತಗಳ ಮರು ಎಣಿಕೆಯಲ್ಲಿ ಮಹತ್ವದ ತಿರುವು : ಡಿ.ಎನ್ ಜೀವರಾಜ್ ಗೆ ಮುನ್ನಡೆ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಶೃಂಗೇರಿ ವಿಧಾನಸಭಾ ಕ್ಷೇತ್ರದ ಅಂಚೆ ಮತಗಳ ಮರು ಮತಎಣಿಕೆಗೆ ಸಂಬಂಧಿಸಿದಂತೆ ರಾತ್ರಿಯಿಡೀ ಹೈಡ್ರಾಮಾ ನಡೆದಿದ್ದು, ಮತ್ತೊಂದು ಮಹತ್ವದ ತಿರುವು ಪಡೆದುಕೊಂಡಿದೆ. ಹೈಕೋರ್ಟ್ ಆದೇಶದಂತೆ ನಡೆದ ಅಂಚೆ ಮತಗಳ ಮರು ಎಣಿಕೆಯಲ್ಲಿ ಗೆಲುವು ಎಂದು ಘೋಷಿಸಲ್ಪಟ್ಟಿದ್ದ ಹಾಲಿ ಶಾಸಕ ಕಾಂಗ್ರೆಸ್ ನ ಟಿ.ಡಿ. ರಾಜೇಗೌಡ ಅವರಿಗೆ ಭಾರಿ ಹಿನ್ನಡೆಯಾಗಿದೆ.**





ಅಂಚೆ ಮತಗಳ ಮರು ಮತ-ಎಣಿಕೆಯಲ್ಲಿ ನಿನ್ನೆ ಸಾಯಂಕಾಲ ಟಿ ಡಿ ರಾಜೇಗೌಡ ಅವರು ವಿಜಯ ಸಾಧಿಸಿದರು ಎಂದು ಹೇಳಲಾಗಿತ್ತು. ಆದರೆ ಮತ ಏಣಿಕೆಯಲ್ಲಿ ಭಾರೀ ಗೊಂದಲಗಳು ಉಂಟಾಗಿತ್ತು. ನಿನ್ನೆ ಬೆಳಗ್ಗೆ ಏಳು ಗಂಟೆಗೆ ಆರಂಭವಾದ ಮತ ಎಣಿಕೆ ಮಧ್ಯರಾತ್ರಿಯವರಿಗೆ ನಡೆಯಿತು. ಇಂದು ಬೆಳಗ್ಗೆ ಎಲ್ಲ ಗೊಂದಲಗಳಿಗೆ ಮಹತ್ವದ ತಿರುವು ಸಿಕ್ಕಿದೆ. 2023ರ ಮೇ 13 ರಂದು ನಡೆದಿದ್ದ ಮತ ಎಣಿಕೆ ವೇಳೆ ಸಿಂಧು ಎಂದು ಪರಿಗಣಿಸಲಾಗಿದ್ದ ಮತಗಳು, ಈಗಿನ ಮರು ಎಣಿಕೆ ವೇಳೆ ತಿರಸ್ಕೃತಗೊಂಡಿವೆ. ಮತಎಣಿಕೆ ಪತ್ರದಲ್ಲಿ ರಾಜೇಗೌಡ ಮತ್ತು ಮತ್ತೊಬ್ಬ ಅಭ್ಯರ್ಥಿ ಇಬ್ಬರಿಗೂ 'ಡಬ್ಬಲ್ ಟಿಕ್' ಮಾಡಿರುವುದು ಕಂಡುಬಂದ ಹಿನ್ನೆಲೆಯಲ್ಲಿ 258 ಮತಗಳು ತಿರಸ್ಕೃತಗೊಂಡವು. ಈ ಹಿಂದೆ 569 ಅಂಚೆ ಮತಗಳನ್ನು ಪಡೆದಿದ್ದ ರಾಜೇಗೌಡರ ಪಟ್ಟಿಯಿಂದ 255 ಮತಗಳು ಮರು ಎಣಿಕೆ ವೇಳೆ ಕಡಿತಗೊಂಡವು. ಬಿಜೆಪಿ ಅಭ್ಯರ್ಥಿ ಡಿ.ಎನ್. ಜೀವರಾಜ್ ಅವರಿಗೆ ಬಂದಿದ್ದ 692 ಅಂಚೆ ಮತಗಳಲ್ಲಿ ಕೇವಲ 2 ಮತಗಳು ಮಾತ್ರ ತಿರಸ್ಕೃತಗೊಂಡಿವೆ. ಈಗಿನ ಮರು ಎಣಿಕೆಯಲ್ಲಿ ರಾಜೇಗೌಡರ 255 ಅಂಚೆ ಮತಗಳು ಕಡಿತಗೊಂಡಿರುವುದರಿಂದ ತನಗೆ ಬಹುಮತ ಬಂದಿದೆ ಎಂದು ಬಿಜೆಪಿ ಅಭ್ಯರ್ಥಿ ಡಿ.ಎನ್. ಜೀವರಾಜ್ ವಿಶ್ವಾಸ ವ್ಯಕ್ತಪಡಿಸಿದ್ದು ಚುನಾವಣಾ ಆಯೋಗ ಅಧಿಕೃತವಾಗಿ ಘೋಷಣೆ ಮಾಡುವುದು ಬಾಕಿ ಇದೆ.

**ರಾತ್ರಿಯಿಡೀ ಹೈಡ್ರಾಮಾ** : ಮರು ಎಣಿಕೆಯಲ್ಲಿ ಇಷ್ಟೊಂದು ದೊಡ್ಡ ಮಟ್ಟದ ವ್ಯತ್ಯಾಸ ಕಂಡುಬಂದ ಬೆನ್ನಲ್ಲೇ ಕಾಂಗ್ರೆಸ್ ಆಕ್ರೋಶ ವ್ಯಕ್ತಪಡಿಸಿದೆ. ಶಾಸಕ ರಾಜೇಗೌಡ ಅವರು ಇಂದು ನಸುಕಿನ ಜಾವ 4 ಗಂಟೆಯವರೆಗೂ ಚಿಕ್ಕಮಗಳೂರು ನಗರ ಪೊಲೀಸ್ ಠಾಣೆಯಲ್ಲಿ ಬೀಡುಬಿಟ್ಟಿದ್ದರು. ಕಾಂಗ್ರೆಸ್ ಮುಖಂಡ ಸುದೀರ್ ಕುಮಾರ್ ಮುರೋಳಿ ಅವರು ಬಿಜೆಪಿ ಅಭ್ಯರ್ಥಿ ಡಿ.ಎನ್. ಜೀವರಾಜ್ ಮತ್ತು ಅಂದಿನ ಚುನಾವಣಾಧಿಕಾರಿ ವೇದಮೂರ್ತಿ ವಿರುದ್ಧ ಮತಗಳ ತಿದ್ದುಪಡಿ ಮಾಡಲಾಗಿದೆ ಎಂದು ದೂರು ನೀಡಿದ್ದಾರೆ. ರಾಜೇಗೌಡರ ಮತಪತ್ರಗಳಲ್ಲಿ 'ಡಬ್ಬಲ್ ಟಿಕ್' ಮಾಡಿ ಉದ್ದೇಶಪೂರ್ವಕವಾಗಿ ಅವುಗಳನ್ನು ತಿರಸ್ಕೃತಗೊಳಿಸಲಾಗಿದೆ ಎಂದು ಕಾಂಗ್ರೆಸ್ ಆರೋಪ ಮಾಡುತ್ತಿದೆ. ಹೈಕೋರ್ಟ್ ಆದೇಶದಂತೆ ಮರು ಎಣಿಕೆ ಮಾಡಿದ್ದೇವೆ. ಹ್ಯಾಂಡ್ ಬುಕ್ ನಿಯಮಗಳ ಪ್ರಕಾರ ಸಿಂಧು ಮತ್ತು ಅಸಿಂಧು ಮತಗಳನ್ನು ನಿರ್ಧರಿಸಲಾಗಿದೆ. ವರದಿಯನ್ನು ಈಗ ಚುನಾವಣಾ ಆಯೋಗಕ್ಕೆ ಸಲ್ಲಿಸಲಾಗಿದೆ ಎಂದು ಚುನಾವಣಾ ಅಧಿಕಾರಿ ತಿಳಿಸಿದ್ದಾರೆ.

# ಶಾಂತಿ ನೆಮ್ಮದಿಗೆ ಪ್ರವಚನ ದಾರಿದೀಪ: ಪಾಟೀಲ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟೆ: ಹಿಂದೆ ಗುರುವಿನ ಆಶೀರ್ವಾದವಿತ್ತು, ಪ್ರಾಮಾಣಿಕ ಬದುಕಿತ್ತು, ಕಷ್ಟಗಳ ಮಧ್ಯೆಯೂ ಸುಖ ನೆಮ್ಮದಿಯಿತ್ತು. ಆದರೆ ಇಂದು ಬಡತನ ತೊಲಗಿ ಸುಖವಿದೆ ಎಂದುಕೊಂಡರೂ ಶಾಂತಿ-ನೆಮ್ಮದಿ ಉಳಿದಿಲ್ಲ ಈ ಶಾಂತಿ ನೆಮ್ಮದಿಗೆ ಪುರಾಣ ಪ್ರವಚನಗಳು ನಮಗೆ ದಾರಿದೀಪವಾಗಿವೆ ಎಂದು ವಿಡಿಸಿಸಿ ಬ್ಯಾಂಕ್ ನಿರ್ದೇಶಕ ಬಿ.ಎಸ್.ಪಾಟೀಲ ಯಾಳಗಿ ಹೇಳಿದರು.**



ಅವರು ಪಟ್ಟಣದ ಹೇಮರೆಡ್ಡಿ ಮಲ್ಲಮ್ಮ ತಾಯಿಯ ದೇವಸ್ಥಾನದಲ್ಲಿ ಇದೇ ಮೇ 10ರಂದು ಜರುಗುವ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ತಾಯಿಯ 604ನೆಯ ಜಯಂತಿಯ ಪ್ರಯುಕ್ತ ಹಮ್ಮಿಕೊಂಡಿರುವ ವರದಾನಿ ಗುಡ್ಡಾಪುರದ ದಾನಮ್ಮ ದೇವಿಯ ಪುರಾಣ ಪ್ರವಚನ ಪ್ರಾರಂಭೋತ್ಸವದ ಕಾರ್ಯಕ್ರಮದಲ್ಲಿ ಭಾನುವಾರ ಮಾತನಾಡಿದರು. ಪುರಾಣ ಪ್ರವಚನಕಾರ ಯಾಳಗಿಯ ಸೋಮಶೇಖರಮಠದ ವೇ.ಮೂ .ಬಸಯ್ಯ ಶಾಸ್ತ್ರೀಯವರು ವರದಾನಿ ಗುಡ್ಡಾಪುರದ ದಾನಮ್ಮ ದೇವಿಯ ಪುರಾಣ ಪ್ರವಚನಕ್ಕೆ ಚಾಲನೆ ನೀಡಿದರು. ವೇದಿಕೆಯಲ್ಲಿ ಸಾನ್ನಿಧ್ಯವಹಿಸಿದ್ದ ಶಾಂತಮ್ಮತಾಯಿ ಕೋಳೂರ, ನೇತೃತ್ವ ವನ್ನು ವಹಿಸಿರುವ ಸಿ.ಎಂ ಹಿರೇಮಠ ಹಾಗೂ ಎಸ್.ಎಂ.ಬೇನಾಳಮಠ,



ಅತಿಥಿಗಳಾಗಿ ಪುರಸಭೆ ಮಾಜಿ ಸದಸ್ಯ ಪ್ರಭುಗೌಡ ಮದರಕಲ್ಲ, ಭಾಜಪ ಜಿಲ್ಲಾ ಘಟಕದ ಮಾಜಿ ಅಧ್ಯಕ್ಷ ಆರ್.ಎಸ್.ಪಾಟೀಲ ಕೂಚಬಾಳ, ಜೆ. ಎಸ್.ಜಿ ಫೌಂಡೇಶನ್ ಕಾರ್ಯದರ್ಶಿ ಶ್ರೀಕಾಂತ ಪತ್ತಾರ, ಹುಣಶ್ಯಾಳ ಸರ್ಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಎಸ್.ಎಸ್.ಗಡೇದ,

ಸಂಗೀತಸೇವೆ ನೀಡುತ್ತಿರುವ ಸ್ಥಳೀಯ ಖಾಸ್ಗತೇಶ್ವರ ಸಂಗೀತಪಾಠಶಾಲೆಯ ಗವಾಯಿ ಮಡಿವಾಳಯ್ಯ ಯಲಗೋಡ, ಹಾಗೂ ತಬಲಾ ಸಾಥಿಯಾಗಿ ಪ್ರವೀಣ ಪತ್ತಾರ ಉಪಸ್ಥಿತರಿದ್ದರು. ಬಾಲೆ ಸೌಮ್ಯಾ ಪಾಟೀಲ ಭರತ ನಾಟ್ಯ ಪ್ರದರ್ಶನ ನೀಡಿದಳು. ಶಿಕ್ಷಕಿ ಪ್ರತಿಭಾ ಬಿರಾದಾರ ಪ್ರಾರ್ಥಿಸಿದರು. ಶಿಕ್ಷಕ ಅಪ್ಪಾಸಾಹೇಬಗೌಡ ಮೂಲಿಮನಿ ನಿರ್ವಹಿಸಿದರು. ಹೇಮರಡ್ಡಿ ಮಲ್ಲಮ್ಮ ಅಸೋಶಿಯೇಶನ್ ಉಪಾಧ್ಯಕ್ಷ ಎಚ್.ಎಸ್.ಪಾಟೀಲ, ಸ್ವಾಗತಿಸಿದರು. ಪುರಾಣ ಪ್ರವಚನ ಕಾರ್ಯಕ್ರಮದಲ್ಲಿ ಸರ್ಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯಿನಿಯರಾದ ಸುಮಂಗಲಾ ಕೋಳೂರ ಹಾಗೂ ರುದ್ರಮ್ಮ ದೇಸಾಯಿ, ಬಿ.ಎಸ್.ದ್ಯಾಪುರ, ಸಂಗನಗೌಡ ಅಸ್ಕಿ, ಎಸ್.ಐ.ಕಡಕೋಳ, ರವೀಂದ್ರ ಪಾಟೀಲ, ಶಶಿಧರ ಓತಗೇರಿ, ಶಶಿಧರ ಕೇಸರಭಾವಿ, ದ್ರಾಕ್ಷಾಯಿಣಿ ಮದರಕಲ್ಲ, ಸವಿತಾ ಅಸ್ಕಿ, ಮಲ್ಲಣ್ಣ ಮೇಟಿ, ಬಸರಕೋಡ, ಪ್ರವೀಣ ರೆಡ್ಡಿ ಇತರರಿದ್ದರು. ಪುರಾಣ ಪ್ರವಚನವು ಮೇ 10ರ ವರೆಗೆ ಪ್ರತಿದಿನ ಸಾಯಂಕಾಲ 6.30 ರಿಂದ 7.30 ರ ವರೆಗೆ ಜರುಗುತ್ತದೆ.

## ನೇಮಕಾತಿ ಪ್ರಕಟಣೆ

ಕರ್ನಾಟಕ ರಾಜ್ಯ ಮಾನಸಿಕ ಆರೋಗ್ಯ ಪ್ರಾಧಿಕಾರ ನೇಮಕಾತಿ 2026 1 ಪ್ರೋಗ್ರಾಂ ಕನ್ಸಲ್ಟೆಂಟ್ ಹುದ್ದೆಗೆ ವಾಕ್-ಇನ್ ಸಂದರ್ಶನ ಮೇ 4, 2026 ಕರ್ನಾಟಕ ರಾಜ್ಯ ಮಾನಸಿಕ ಆರೋಗ್ಯ ಪ್ರಾಧಿಕಾರ ನೇಮಕಾತಿ 2026: 1 ಪ್ರೋಗ್ರಾಂ ಕನ್ಸಲ್ಟೆಂಟ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕರ್ನಾಟಕ ರಾಜ್ಯ ಮಾನಸಿಕ ಆರೋಗ್ಯ ಪ್ರಾಧಿಕಾರವು ಮೇ 2026 ರ ಅಧಿಕೃತ ಅಧಿಸೂಚನೆಯ ಮೂಲಕ ಪ್ರೋಗ್ರಾಂ ಕನ್ಸಲ್ಟೆಂಟ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಬೆಂಗಳೂರಿನಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು – ಕರ್ನಾಟಕ ಸರ್ಕಾರ ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 12-ಮೇ-2026 ರಂದು ವಾಕ್-ಇನ್-ಇಂಟರ್ವ್ಯೂಗೆ ಹಾಜರಾಗಬಹುದು. ಅಧಿಸೂಚನೆ ಬಿಡುಗಡೆ ದಿನಾಂಕ: 19-04-2026 ವಾಕ್-ಇನ್ ದಿನಾಂಕ: 12-ಮೇ-2026 ಅಧಿಕೃತ ವೆಬ್‌ಸೈಟ್: hfwcom.karnataka.gov.in



ಕೊಪ್ಪಳ ಜಿಲ್ಲಾ ಕೊಪ್ಪಳ ತಾಲೂಕು ಮೈನಹಳ್ಳಿಯ ಶ್ರೀ ಶಿವಶರಣೆ ಬುಡ್ಡಮ್ಮದೇವಿಯ ರಥೋತ್ಸವ ಅದ್ದೂರಿಯಾಗಿ ಜರುಗಿತು ಶ್ರೀದೇವಿಯ ರಥೋತ್ಸವದ ಬಾವುಟವನ್ನು ಶ್ರೀಯುತ ಹೊನ್ನಕೆರಪ್ಪ ಮುದಕಪ್ಪ ಮುಸ್ಟೆಕೊಪ್ಪ ಸಾಕಿನ ಮುಸ್ಟೆಕೊಪ್ಪ 405101-00 ಗಳಿಗೆ ತೆಗೆದು ಕೊಂಡರು.

## ತಮಿಳುನಾಡಿನಲ್ಲಿ ಹೊಸ ಯುಗಾರಂಭ : ರಾಜ್ಯದ ಜನತೆ ನಮ್ಮೊಂದಿಗಿದ್ದಾರೆ; ಡಿಕೆ ಶಿವಕುಮಾರ್

**ನೈಜ್ಯ ದೆಸೆ ನ್ಯೂಸ್**

**ಬೆಂಗಳೂರು: ಜನ ನಮ್ಮ ಜೊತೆ ಇದ್ದಾರೆ, ನಮ್ಮ ಗ್ಯಾರಂಟಿ ನಮ್ಮ ಕೈ ಹಿಡಿದಿದೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದ್ದಾರೆ. ಬಾಗಲಕೋಟೆ ಮತ್ತು ದಾವಣಗೆರೆ ಉಪಚುನಾವಣೆ ಹಾಗೂ ಪಂಚರಾಜ್ಯಗಳ ಫಲಿತಾಂಶಗಳ ಬಗ್ಗೆ ಪ್ರತಿಕ್ರಿಯಿಸಿದ ಅವರು, ದಾವಣಗೆರೆಯಲ್ಲಿ ಕಾಂಗ್ರೆಸ್ ಲೀಡ್ ಇದೆ. ಎಸ್‌ಡಿಪಿಐ ವೋಟ್ ನಮಗೆ ಡೇಂಜರ್ ಆಗಿದೆ. ಎಸ್‌ಡಿಪಿಐ ಅವರನ್ನು ಲೈಟಾಗಿ ತೆಗೆದುಕೊಂಡಿಲ್ಲ. ಇಷ್ಟು ಆಗಲಿದೆ ಅಂತ ಅಂದಾಜಿಸಿರಲಿಲ್ಲ ಎಂದಿದ್ದಾರೆ.**



ಅದು ಪೊಲಿಟಿಕಲ್ ಪಾರ್ಟಿ ಅಲ್ಲ. ಮುಸ್ಲಿಂ ನಾಯಕರು ಕೆಲಸ ಮಾಡಿಲ್ಲ ಎಂಬ ಬಗ್ಗೆ ನಾನು ಮಾತನಾಡಲ್ಲ. ಈ ಬಗ್ಗೆ ಮುಖ್ಯಮಂತ್ರಿಗಳು ಎಲ್ಲಾ ವಿಷಯ ತಿಳಿಸಿದ್ದಾರೆ, ಎಸ್‌ಡಿಪಿಐ ಕೂಡ 12 ಸಾವಿರ ವೋಟ್ ತೆಗೆದುಕೊಂಡಿದೆ. ನಮ್ಮ ಗ್ಯಾರಂಟಿ ರಾಜ್ಯದಲ್ಲಿ ಚೆನ್ನಾಗಿ ನಡೆಯುತ್ತಿದೆ. ಜನ ಸ್ಪಂದಿಸಿದ್ದಾರೆ. ಇದಕ್ಕೆ ಈ ಫಲಿತಾಂಶ ಉದಾಹರಣೆ. ಇನ್ನೂ ರೌಂಡ್ ಇದೆ, ಚೆನ್ನಾಗಿ ಆಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು ತಮಿಳುನಾಡು ಫಲಿತಾಂಶದಿಂದ ಆಶ್ಚರ್ಯ ಆಗಿದೆ. ಅಲ್ಲಿ ಹೊಸ ಯುಗಾರಂಭವಾಗಿದೆ ಎಂದಿದ್ದಾರೆ. ತಮಿಳುನಾಡು ಫಲಿತಾಂಶ ಗ್ರಹಿಸಲು ಆಗಲಿಲ್ಲ. 30-40% ವೋಟ್ ಹೋಗಬಹುದು ಅಂದುಕೊಂಡಿದ್ದೆವು. ಈ ಪ್ರಮಾಣದಲ್ಲಿ ಬದಲಾವಣೆ ಆಗುತ್ತೆ ಅಂತ ಅಂದುಕೊಂಡಿರಲಿಲ್ಲ ಎಂದರು. ಕೇರಳ ಫಲಿತಾಂಶದ ಬಗ್ಗೆ ನಂಬಿಕೆ ಇತ್ತು. 10 ವರ್ಷ ಆಗಿತ್ತು. ಹೀಗಾಗಿ ಜನ ಬದಲಾವಣೆ ಬಯಸಿದ್ದಾರೆ. ಇವತ್ತು ದೊಡ್ಡ ಬೆಂಬಲ ಸಿಕ್ಕಿದೆ. ಅಸ್ಸಾಂನಲ್ಲಿ ಪಾರ್ಟಿ ಡ್ಯೂಟಿ ಮಾಡಿದ್ದೇನೆ. ಹೆಚ್ಚು ಸೀಟ್ ನಿರೀಕ್ಷೆ ಇತ್ತು. ಲೋಕಲ್ ಕೂಡ 50 ಹೇಳಿತ್ತು. ಡಿಲಿಮಿಟೇಷನ್ ಕೂಡ ಒಂದು ಕಾರಣ ವಾಗಿದೆ. ಪಶ್ಚಿಮ ಬಂಗಾಳದಲ್ಲಿ ವೋಟ್ ಡಿಲೀಟ್ ಮಾಡಿದ್ದಾರೆ. ಮೆಷಿನ್ ಕೂಡ ಸಮಸ್ಯೆ ಮಾಡಿದ್ರು. ಗೆಲ್ಲಲೇಬೇಕು ಅನ್ನೋ ಕಾರಣಕ್ಕೆ ಬಿಜೆಪಿ ಏನೇನೋ ಮಾಡಿದ್ದಾರೆ ಎಂದು ಡಿಕೆ ಶಿವಕುಮಾರ್ ಆರೋಪಿಸಿದ್ದಾರೆ.

# ಅನಧಿಕೃತ ಕೋಚಿಂಗ್ ಸೆಂಟರ್‌ಗಳ ವಿರುದ್ಧ ಕ್ರಮಕ್ಕೆ ಕರವೇ ಒತ್ತಾಯ .

**ನೈಜ್ಯ ದೆಸೆ ನ್ಯೂಸ್**

**ಲಿಂಗಸಗೂರು: ಪಟ್ಟಣವು ಸೇರಿದಂತೆ ತಾಲೂಕಿನ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಇತ್ತೀಚಿನ ದಿನಗಳಲ್ಲಿ ಅನಧಿಕೃತವಾಗಿ ಕಾರ್ಯನಿರ್ವಹಿಸುತ್ತಿರುವ ಕೋಚಿಂಗ್ ಸೆಂಟರ್‌ಗಳ ಸಂಖ್ಯೆ ಗಣನೀಯವಾಗಿ ಹೆಚ್ಚುತ್ತಿರುವುದು ಗಮನಾರ್ಹವಾಗಿದೆ.**

ಯಾವುದೇ ಅನುಮತಿ, ಮಾನ್ಯತೆ ಅಥವಾ ಸಂಬಂಧಪಟ್ಟ ಇಲಾಖೆಗಳ ನೋಂದಣಿ ಪಡೆಯದೆ ಇವುಗಳು ಕಾರ್ಯ ನಿರ್ವಹಿಸುತ್ತಿರುವುದು ಕಾನೂನು ಉಲ್ಲಂಘನೆಯಾಗಿದ್ದು, ಸಾರ್ವಜನಿಕ ಹಿತಾಸಕ್ತಿಗೆ ಧಕ್ಕೆಯಾಗುತ್ತಿದೆ ಇಂತಹ ಅನಧಿಕೃತ ಕೋಚಿಂಗ್ ಸೆಂಟರ್‌ಗಳ ವಿರುದ್ಧ ಸೂಕ್ತ ಕಾನೂನು ಕ್ರಮ ತೆಗೆದುಕೊಳ್ಳುವಂತೆ ಕರವೇ (ಪ್ರವೀಣಕುಮಾರ್ ಶೆಟ್ಟಿ ಬಣ) ದ ತಾಲೂಕ ಅಧ್ಯಕ್ಷ ಆಂಜನೇಯ ಭಂಡಾರಿ



ಸಹಾಯಕ ಆಯುಕ್ತರಿಗೆ ಮನವಿಯನ್ನು ಸಲ್ಲಿಸಿ ನಂತರ ಮಾತನಾಡಿದ ಅವರು ಇಂತಹ ಅನಧಿಕೃತ ಕೋಚಿಂಗ್ ಕೇಂದ್ರಗಳು ವಿದ್ಯಾರ್ಥಿಗಳಿಂದ ಹೆಚ್ಚಿನ ಶುಲ್ಕ ವಸೂಲಿ ಮಾಡುತ್ತಿರುವುದಲ್ಲದೆ, ಗುಣಮಟ್ಟದ ಶಿಕ್ಷಣ ನೀಡುವಲ್ಲಿ ವಿಫಲವಾಗುತ್ತಿವೆ.

ಕೆಲವು ಕಡೆಗಳಲ್ಲಿ ಮೂಲಭೂತ ಸೌಕರ್ಯಗಳಾದ ಸುರಕ್ಷಿತ ಕಟ್ಟಡ, ಅಗ್ನಿಶಾಮಕ ವ್ಯವಸ್ಥೆ, ಶೌಚಾಲಯ ಸೇರಿದಂತೆ ಅಗತ್ಯ ಸೌಲಭ್ಯಗಳ ಕೊರತೆ ಇರುವುದರಿಂದ ವಿದ್ಯಾರ್ಥಿಗಳ ಸುರಕ್ಷತೆಗೂ ಧಕ್ಕೆ ಉಂಟಾಗಿದೆ. ಇದರಿಂದಾಗಿ ಪೋಷಕರು ಹಾಗೂ ವಿದ್ಯಾರ್ಥಿಗಳು ಮೋಸಹೋಗುತ್ತಿರುವುದರಿಂದ. ಇಂತಹ ಕೇಂದ್ರಗಳ ಮೇಲೆ ತಕ್ಷಣ ಪರಿಶೀಲನೆ ನಡೆಸಿ, ಅಗತ್ಯವಿದ್ದಲ್ಲಿ ಅವುಗಳನ್ನು ಮುಚ್ಚುವಂತೆ ಕ್ರಮ ಕೈಗೊಳ್ಳಬೇಕಾಗಿ ವಿನಂತಿಸಿಕೊಳ್ಳುತ್ತೇವೆ.

ಜೊತೆಗೆ, ಮಾನ್ಯತೆ ಪಡೆದ ಹಾಗೂ ನಿಯಮಾನುಸಾರ ಕಾರ್ಯನಿರ್ವಹಿಸುವ ಸಂಸ್ಥೆಗಳ ಪಟ್ಟಿಯನ್ನು ಸಾರ್ವಜನಿಕರಿಗೆ ಪ್ರಕಟಿಸುವ ಮೂಲಕ ಜಾಗೃತಿ ಮೂಡಿಸುವ ಕ್ರಮ ಕೈಗೊಳ್ಳಬೇಕು , ಇಂತಹ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ಅನಧಿಕೃತ ಕೋಚಿಂಗ್ ಸೆಂಟರ್‌ಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಂಡು, ವಿದ್ಯಾರ್ಥಿಗಳ ಹಿತವನ್ನು ಕಾಪಾಡಬೇಕು ಒಂದು ವೇಳೆ ನಮ್ಮ ಮನವಿಗೆ ಸ್ಪಂದಿಸದಿದ್ದರೆ ತಮ್ಮ ಕಾರ್ಯಾಲಯದ ಮುಂದೆ ಪ್ರತಿಭಟನೆ ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಅಶೋಕ್ ಪತ್ತಾರ್, ಸಲೀಮ್ ಖಾನ್, ಅಶೋಕ್ ನಾಯಕ್, ಕುಪ್ಪ ಸೇರಿದಂತೆ ಹಲವರಿದ್ದರು.

# ಹೇಮರೆಡ್ಡಿ ಮಲ್ಲಮ್ಮ ಜಯಂತಿ: ಪೂರ್ವಭಾವಿ ಸಭೆ



**ನೈಜ್ಯ ದೆಸೆ ನ್ಯೂಸ್**

**ತಾಳಿಕೋಟಿ:** ಪಟ್ಟಣದಲ್ಲಿ ಮೇ 10 ರಂದು ತಾಲೂಕ ಆಡಳಿತದ ವತಿಯಿಂದ ಮಹಾಸಾಧ್ವಿ ಶ್ರೀ ಹೇಮರೆಡ್ಡಿ ಮಲ್ಲಮ್ಮ ಅವರ ಜಯಂತಿಯನ್ನು ಆಚರಿಸುವ ಕುರಿತು ಪೂರ್ವಭಾವಿ ಸಭೆ ಸೋಮವಾರ ತಹಸಿಲ್ದಾರ್ ಕಾರ್ಯಾಲಯದಲ್ಲಿ ಜರುಗಿತು.

ಸಭೆಯ ಅಧ್ಯಕ್ಷತೆಯನ್ನು ವಹಿಸಿದ ತಹಸಿಲ್ದಾರ್ ಡಾ.ವಿನಯಾ ಹೂಗಾರ ಅವರು ಮಾತನಾಡಿ ಮಹಾಸಾಧ್ವಿ ಶ್ರೀ ಹೇಮರೆಡ್ಡಿ ಮಲ್ಲಮ್ಮನವರ ಜಯಂತಿಯನ್ನು ಸರಳ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುವುದು. ತಾಲೂಕಿನ ಎಲ್ಲ ಕಚೇರಿಗಳಲ್ಲಿ ಬೆಳಿಗ್ಗೆ 8-00 ಗಂಟೆಗೆ ಸಂಬಂಧಿಸಿದ ಅಧಿಕಾರಿಗಳು ಮಲ್ಲಮ್ಮನವರ ಭಾವಚಿತ್ರದ ಪೂಜೆಯನ್ನು ನೆರವೇರಿಸಿ ಜಯಂತಿಯ ಆಚರಣೆ ಮಾಡುವುದು, ಅದೇ ರೀತಿ ಬೆಳಿಗ್ಗೆ 8:30 ಘಂಟೆಗೆ ತಾಲೂಕ ಆಡಳಿತದ ವತಿಯಿಂದ ಸಮಾಜ ಬಾಂಧವರ ಸಹಕಾರದೊಂದಿಗೆ ಕಾರ್ಯಾಲಯದ ಸಭಾಂಗಣದಲ್ಲಿ ಜಯಂತಿಯನ್ನು ಆಚರಿಸಲಾಗುವುದು ಇದರಲ್ಲಿ ತಾಲೂಕ ಮಟ್ಟದ ಅಧಿಕಾರಿಗಳು ಉಪಸ್ಥಿತರಿರುವರು.

ಜಯಂತಿ ಆಚರಣೆಯಲ್ಲಿ ಯಾವುದೇ ರೀತಿಯ ಲೋಪ ಆಗದಂತೆ ಅಧಿಕಾರಿಗಳು ನೋಡಿಕೊಳ್ಳಬೇಕೆಂದು ಅವರು ತಿಳಿಸಿದರು. ಸಭೆಯಲ್ಲಿ ಸಮಾಜದ ಪರವಾಗಿ ಪ್ರಮುಖರಾದ ಜಿ.ಜಿ.ಮದರಕಲ್ಲ ಹಾಗೂ ಪುರಸಭೆ ಮಾಜಿ ಸದಸ್ಯ ಪ್ರಭುಗೌಡ ಮದರಕಲ್ಲ ಮಾತನಾಡಿ ಕೆಲವು ಸಲಹೆ ಸೂಚನೆಗಳನ್ನು ನೀಡಿದರು. ಸಭೆಯಲ್ಲಿ ಸಮಾಜದ ಗಣ್ಯರಾದ ಎಚ್‌ಎಸ್ ಪಾಟೀಲ, ಸಿ.ಎಸ್.ಮಾಳಿ,ರವಿ ಪಾಟೀಲ, ಸಂಗನಗೌಡ ಅಸ್ಕಿ, ಕ್ಷೇತ್ರ ಸಮನ್ವಯಾಧಿಕಾರಿ ಆರ್.ಬಿ.ದಮ್ಮೂರಮಠ ಪಿಎಸ್‌ಐ ಎಸ್.ಎಂ.ಪಡಶೆಟ್ಟಿ, ಕೃಷಿ ಅಧಿಕಾರಿ ಮಹೇಶ ಜೋಶಿ,ತಾಪಂ ನ ಮಹಾಂತಗೌಡ ದೊರೆಗೋಳ,ನಿಲಯ ಪಾಲಕ ಹಣಮಂತಪ್ಪ ಬಾದವಾಡಗಿ ಮತ್ತಿತರರು ಇದ್ದರು.

# ಉಪಚುನಾವಣೆಯಲ್ಲಿ ಗೆಲುವು: ಅರಕೇರಾದಲ್ಲಿ ಬ್ಲಾಕ್ ಕಾಂಗ್ರೆಸ್ ಪಕ್ಷದವತಿಯಿಂದ ಸಿಹಿ ಹಂಚಿಕೆ

**ನೈಜ್ಯ ದೆಸೆ ನ್ಯೂಸ್**

**ಅರಕೇರಾ: ದಾವಣಗೆರೆ ದಕ್ಷಿಣ ಹಾಗೂ ಬಾಗಲಕೋಟೆ ಕ್ಷೇತ್ರಗಳಲ್ಲಿ ಉಪಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಗೆಲುವು ಸಾಧಿಸಿದ್ದು ಎರಡು ಕಡೆಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ವಿಜಯ ಪತಾಕೆ ಹಾರಿಸಿದ್ದಾರೆಂದು ಎಂದು ಪರಿಶಿಷ್ಟ ಪಂಗಡ ಅರಕೇರಾ ತಾಲೂಕು ಕಾಂಗ್ರೆಸ್ ಅಧ್ಯಕ್ಷರ ಬಸವರಾಜ ಪೂಜಾರಿಯವರು ಹೇಳಿದರು.**

ದಾವಣಗೆರೆ ದಕ್ಷಿಣ ಕ್ಷೇತ್ರದ ಸಮರ್ಥ ಶಾಮನೂರು ಅಂತರದಿಂದ ಕಾಂಗ್ರೆಸ್ ಜಯಬೇರಿ ಭಾರಿಸಿದೆ.ಬಾಗಲಕೋಟೆಯಲ್ಲಿ ಉಮೇಶ ಮೇಟಿಯವರು ಗೆಲುವು ಸಾಧಿಸಿದ್ದಾರೆ



ಎರಡು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳ ಆಯ್ಕೆಯಾಗುವ ಮೂಲಕ ಕ್ಷೇತ್ರದಲ್ಲಿ ತನ್ನ ಬಲವನ್ನು ಮತ್ತೊಮ್ಮೆ ಸಾಬಿತಪಡಿಸಿದೆ. ಉಪಚುನಾವಣೆ ಫಲಿತಾಂಶ ಹಿನ್ನೆಯಲ್ಲಿ ಅರಕೇರಾ ಪಟ್ಟಣದಲ್ಲಿ ಅರಕೇರಾ ಬ್ಲಾಕ್ ಕಾಂಗ್ರೆಸ್ ಪಕ್ಷದವತಿಯಿಂದ ವಿಜಯೋತ್ಸವವನ್ನು ಸಿಹಿ ಹಂಚುವ ಮೂಲಕ ಆಚರಣೆ ಮಾಡಲಾಯಿತು ಎಂದು ಬಸವರಾಜ ಪೂಜಾರಿ ಹೇಳಿದರು,

ಸಂದರ್ಭದಲ್ಲಿ ಅರಕೇರಾ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ವಿರೇಶಶಾಖೆ ಹೆಮನೂರು, ಪ್ರಚಾರ ಸಮಿತಿ ಅಧ್ಯಕ್ಷ ಹನುಮಂತ್ರಾಯ ನಾಯಕ ಆಕಳಕುಂಪಿ, ಕಾಂಗ್ರೆಸ್ ವಕ್ತಾರ ರಾಜುನಾಯಕ, ಯುವಮೋರ್ಚಾ ಅಧ್ಯಕ್ಷ ರಾಜುಗೌಡ ಗೆಜ್ಜೆಭಾವಿ, ಸಿದ್ದಪ್ಪಕಬ್ಬೇರ, ಹನುಮಂತ್ರಾಯ ಸಾತಲ್, ಹನುಮಂತ್ರಾಯಗಾರ್ಮೆಂಟ್, ಸಿದ್ದಯ್ಯಮಠಪತಿ, ರಾಘವೇಂದ್ರಪೂಜಾರಿ ಮುಂತಾದವರು ಉಪಸ್ಥಿತರಿದ್ದರು.

# ರಾಜ್ಯದ ಉಪಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳ ಗೆಲುವಿಗೆ ಮಾನವಿ ಪಟ್ಟಣದಲ್ಲಿ ಸಂಭ್ರಮಾಚರಣೆ



**ನೈಜ್ಯ ದೆಸೆ ನ್ಯೂಸ್**

**ಮಾನ್ವಿ: ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಲ್ಲಿ ಕಾಂಗ್ರೇಸ್ ಪಕ್ಷದ ವತಿಯಿಂದ ರಾಜ್ಯದ ಎರಡು ವಿಧಾನಸಭಾ ಕ್ಷೇತ್ರಗಳಲ್ಲಿ ನಡೆದ ಉಪ ಚುನಾವಣೆಯಲ್ಲಿ ಕಾಂಗ್ರೇಸ್ ಪಕ್ಷದ ಅಭ್ಯಾರ್ಥಿಗಳು ಗೇಲುವು ಸಾಧಿಸಿರುವುದಕ್ಕೆ ನೂರಾರು ಕಾಂಗ್ರೇಸ್ ಪಕ್ಷದ ಕಾರ್ಯಕರ್ತರು ಸಾರ್ವಜನಿಕರಿಗೆ ಸಿಹಿ ಹಂಚುವ ಮೂಲಕ ಹಾಗೂ ಪಟಾಕಿ ಸಿಡಿಸುವ ಮೂಲಕ ವಿಜಯೋತ್ಸವ ಆಚರಿಸಿದರು.**

ಶಾಸಕ ಹಂಪಯ್ಯನಾಯಕ ಮಾತನಾಡಿ ರಾಜ್ಯದಲ್ಲಿ ಎರಡು ವಿಧಾನಸಭಾ ಕ್ಷೇತ್ರಗಳಲ್ಲಿ ನಡೆದ ಉಪಚುನಾವಣೆಯಲ್ಲಿ ಕಾಂಗ್ರೇಸ್ ಪಕ್ಷದ ಅಭ್ಯಾರ್ಥಿಗಳಾದ ಬಾಗಲಕೋಟೆ ಕ್ಷೇತ್ರದಿಂದ ಉಮೇಶ್‌ಮೇಟಿ ಹಾಗೂ ದಾವಣಗೆರೆ ದಕ್ಷಿಣ ಕ್ಷೇತ್ರದಿಂದ ಸಮರ್ಥ ಶಾಮನೂರು ರವರು ಗೇಲುವು ಸಾಧಿಸಿರುವುದು ಕಾಂಗ್ರೇಸ್ ಪಕ್ಷ ನೇತೃತ್ವದ ರಾಜ್ಯಸರ್ಕಾರದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರ ಉತ್ತಮ ಆಡಳಿತ ಹಾಗೂ ಜನಪ್ರೀಯ ಯೋಜನೆಗಳು ಹಾಗೂ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷರು ಹಾಗೂ ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ರವರ ಪಕ್ಷ ಸಂಘಟನೆಯೇ ಕಾರಣ ಮುಂದಿನ 2028ರ ಚುನಾವಣೆಯಲ್ಲಿ ಕೂಡ ರಾಜ್ಯದ ಜನರು ಕಾಂಗ್ರೇಸ್ ಪಕ್ಷಕ್ಕೆ ಮತ್ತೆ ಅವಕಾಶ ನೀಡಲಿದ್ದಾರೆ ಎಂದು ತಿಳಿಸಿದರು.

ಕಾಂಗ್ರೇಸ್ ರಾಜ್ಯ ಯುವ ಮುಖಂಡ ರವಿ ಬೋಸುರಾಜು ಸೇರಿದಂತೆ ಹಿರಿಯ ಮುಖಂಡರಾದ ಕೆ .ಬಸವಂತಪ್ಪ, ರಾಜಾ ಸುಭಾಷ್ ಚಂದ್ರ ನಾಯಕ್. ಮಾಜಿ ಎ.ಪಿ.ಎಂ.ಸಿ.ಸದಸ್ಯರಾದ ಶಿವರಾಜ ನಾಯಕ ವಕೀಲರು, ಚಂದ್ರಶೇಖರ್ ಕುರುಡಿ, ಹುಸೇನಪ್ಪಾ ಜಗ್ಲಿ, ಶಿವಪ್ಪಗೌಡ ಹಳ್ಳಿಹೊಸೂರ್ ,ಜಿಲಾನಿ ಖುರೇಶಿ, ಸಾಬೀರ್ ಪಾಷಾ, ಅರುಣಚಂದಾ, ,ಮಲ್ಲೇಶ್ ಜಗ್ಲಿ, ಸೇರಿದಂತೆ ನೂರಾರು ಕಾರ್ಯಕರ್ತರು ಭಾಗವಹಿಸಿದರು.

# ಮಸರಕಲ್ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಎನ್.ಕ್ಯೂ.ಎ.ಎಸ್‌ನ ರಾಷ್ಟ್ರೀಯ ಗೌರವ: 91.27% ಅಂಕಗಳೊಂದಿಗೆ ಅಭೂತಪೂರ್ವ ಸಾಧನೆ

**ನೈಜ್ಯ ದೆಸೆ ನ್ಯೂಸ್**

**ರಾಯಚೂರು: ಜಿಲ್ಲೆಯ ದೇವದುರ್ಗ ತಾಲೂಕಿನ ಮಸರಕಲ್ ಪ್ರಾಥಮಿಕ ಆರೋಗ್ಯ ಕೇಂದ್ರವು ರಾಷ್ಟ್ರೀಯ ಆರೋಗ್ಯ ಮಿಷನ್ ಅಡಿಯಲ್ಲಿ ಜಾರಿಯಲ್ಲಿರುವ ರಾಷ್ಟ್ರೀಯ ಗುಣಮಟ್ಟ ಭರವಸೆ ಮಾನದಂಡಗಳ (ಎನ್.ಕ್ಯೂ.ಎ.ಎಸ್.) ಪರಿಶೀಲನೆಯಲ್ಲಿ ಶ್ರೇಷ್ಠ ಸಾಧನೆ ಮಾಡಿ ರಾಷ್ಟ್ರೀಯ ಮಟ್ಟದ ಗುಣಮಟ್ಟ ಪ್ರಮಾಣಪತ್ರವನ್ನು ಪಡೆದುಕೊಂಡಿದ್ದು, ಇದು ಜಿಲ್ಲೆಗೆ ಹೆಮ್ಮೆಯ ವಿಷಯವಾಗಿದೆ ಎಂದು ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರಬಾಬು ಸಂತಸ ಹಂಚಿಕೊಂಡರು.**

ಇತ್ತೀಚಿಗೆ ಕೇಂದ್ರ ತಂಡದ ಮಹಾರಾಷ್ಟ್ರದ ಡಾ.ಶ್ರೀಶೈಲ್ ಪಾಟೀಲ್ ಹಾಗೂ ತಮಿಳುನಾಡಿನ ಕಾವೇರಿ ಸೇಲ್ವಿ ಅವರ ತಂಡ ಕೈಗೊಂಡ ಸಮಗ್ರ ಮೌಲ್ಯಮಾಪನದಲ್ಲಿ ಮಸರಕಲ್ ಒಟ್ಟಾರೆ 91.27% ಅಂಕಗಳನ್ನು ಗಳಿಸಿರುವುದು ಜಿಲ್ಲೆಯ




ಆರೋಗ್ಯ ಕ್ಷೇತ್ರದಲ್ಲಿ ಮಹತ್ವದ ಸಾಧನೆಯಾಗಿದೆ. ಮೌಲ್ಯಮಾಪನ ಪ್ರಕ್ರಿಯೆಯಲ್ಲಿ ಮೂಲ ಸೌಕರ್ಯ, ರೋಗಿ ಸ್ನೇಹಿ ಸೇವೆಗಳು, ಆಸ್ಪತ್ರೆಯ ಸ್ವಚ್ಛತೆ, ಔಷಧಗಳ ಲಭ್ಯತೆ, ತುರ್ತು ಚಿಕಿತ್ಸಾ ವ್ಯವಸ್ಥೆ, ದಾಖಲೆ ನಿರ್ವಹಣೆ ಸೇರಿದಂತೆ ಹಲವು ಅಂಶಗಳನ್ನು ಸೂಕ್ಷ್ಮವಾಗಿ ಪರಿಶೀಲಿಸಲಾಗಿತ್ತು. ಈ ಎಲ್ಲ ವಿಭಾಗಗಳಲ್ಲಿ ಉತ್ತಮ ಕಾರ್ಯನಿರ್ವಹಣೆ ತೋರಿದ ಪರಿಣಾಮ ಉನ್ನತ ಅಂಕಗಳನ್ನು ಪಡೆದುಕೊಳ್ಳಲಾಗಿದೆ ಎಂದು ಅವರು ವಿವರಿಸಿದರು. ಮಇದನ್ನು ಮಾನದಂಡವಾಗಿ ಪರಿಗಣಿಸಿ ಜಿಲ್ಲೆಯ ಉಳಿದ ಕೇಂದ್ರಗಳನ್ನು ಈ ದಿಶೆಯಲ್ಲಿ ರೂಪಿಸಲಾಗುವುದು ಎಂದರು.

ಈ ಕುರಿತು ಮಾಹಿತಿ ನೀಡಿದ ಜಿಲ್ಲಾ ಎನ್‌ಫೋರ್ಸ್ಮೆಂಟ್ ಅಧಿಕಾರಿ ಗ್ರಾಮೀಣ ಪ್ರದೇಶಗಳಲ್ಲಿಯೂ ಉತ್ತಮ ಮತ್ತು ಮಾನದಂಡಗಳಿಗೆ ಅನುಗುಣವಾದ ಆರೋಗ್ಯ ಸೇವೆಗಳನ್ನು ಒದಗಿಸುವ ಸರ್ಕಾರದ ಉದ್ದೇಶವನ್ನು ಈ ಸಾಧನೆ ಸ್ಪಷ್ಟಪಡಿಸುತ್ತದೆ ಎಂದರು. ನಿಗದಿತ ಮಾನದಂಡಗಳನ್ನು ಕಟ್ಟುನಿಟ್ಟಾಗಿ ಅನುಸರಿಸಿ, ಆಸ್ಪತ್ರೆಯ ಎಲ್ಲಾ ವಿಭಾಗಗಳಲ್ಲಿ ಗುಣಮಟ್ಟವನ್ನು ಕಾಪಾಡಿಕೊಂಡಿರುವುದರಿಂದಲೇ ಈ ಯಶಸ್ಸು ಸಾಧ್ಯವಾಗಿದೆ ಎಂದು ತಿಳಿಸಿದರು. ವೈದ್ಯರು, ನರ್ಸಿಂಗ್ ಸಿಬ್ಬಂದಿ ಹಾಗೂ ಇತರ ಆರೋಗ್ಯ ಸಿಬ್ಬಂದಿಯ ಪರಿಶ್ರಮ ಮತ್ತು ಸಮರ್ಪಣೆಯು ಅಡಗಿದೆ ಎಂದರು. ಸಾಧನೆ ಹೇಗೆ ಸಾಧ್ಯವಾಯಿತು.

ಪ್ರತಿದಿನವೂ ರೋಗಿಗಳಿಗೆ ಗುಣಮಟ್ಟದ ಸೇವೆ ನೀಡುವ ದೃಷ್ಟಿಯಿಂದ ತಂಡವಾಗಿ ಕೆಲಸ ಮಾಡುತ್ತಿರುವ ಸಿಬ್ಬಂದಿಯ ನಿಷ್ಠೆ ಮತ್ತು ಸೇವಾಭಾವನೆ ಜೊತೆಗೆ ಸ್ಥಳೀಯ ಜನರ ಸಹಕಾರ, ಆರೋಗ್ಯ, ಜಾಗೃತಿ ಕಾರ್ಯಕ್ರಮಗಳಲ್ಲಿ ಅವರ ಸಕ್ರಿಯ ಭಾಗವಹಿಸುವಿಕೆ ಹಾಗೂ ಆಸ್ಪತ್ರೆಯ ಮೇಲಿನ ವಿಶ್ವಾಸವೂ ಈ ಸಾಧನೆಯನ್ನು ಸಾಧ್ಯವಾಗಿಸಿದೆ ಎಂದು ಅವರು ಹೇಳಿದರು. ಇದಲ್ಲದೆ ಜನಪ್ರತಿನಿಧಿಗಳು, ಶಾಸಕರು ಮತ್ತು ಸಂಸದರು, ಜಿಲ್ಲಾಡಳಿತ ಹಾಗೂ ತಾಲ್ಲೂಕು ಆಡಳಿತದಿಂದ ದೊರೆತ ಮಾರ್ಗದರ್ಶನ ಮತ್ತು ಬೆಂಬಲವೂ ಈ ಸಾಧನೆಯಲ್ಲಿ ಮಹತ್ವದ ಪಾತ್ರ ವಹಿಸಿದೆ. ಇದಕ್ಕಾಗಿ ತಾಲುಕಾ ಆರೋಗ್ಯಾಧಿಕಾರಿ ಡಾ ಬನದೇಶ, ಆಡಳಿತ ವೈದ್ಯಾಧಿಕಾರಿ ಡಾ ಶಂಶುದ್ದೀನ್, ಜಿಲ್ಲಾ ಗುಣಮಟ್ಟ ಭರವಸೆ ಸಲೆಹೆಗಾರರಾದ ಹರೀಶ್ ಪತಂಗೆ, ಸತತ ನಿಗಾವಣೆ, ಕಾರ್ಯಕ್ರಮ ಅನುಷ್ಟಾನ ಅಧಿಕಾರಿಗಳ ಸಲಹೆ ಸಿಬ್ಬಂದಿಯವರಾದ ಮಲ್ಲಯ್ಯ ಹಿರೇಮಠ, ಪರವೇಜ್, ಸೇರಿದಂತೆ ಎಲ್ಲ ಸಿಬ್ಬಂದಿಗಳ ಕಠಿಣ ಪರಿಶ್ರಮದಿಂದ ಈ ಪ್ರಮಾಣ ಪತ್ರವನ್ನು ಪಡೆದುಕೊಳ್ಳಲು ಸಾಧ್ಯವಾಯಿತು ಎಂದರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಬಿ.ಟೆಕ್. ಮೆಕ್ಯಾನಿಕಲ್ ಎಂಜಿನಿಯರಿಂಗ್

ಬಿ.ಟೆಕ್. ಮೆಕ್ಯಾನಿಕಲ್ ಎಂಜಿನಿಯರಿಂಗ್ ಪದವಿಪೂರ್ವ ಪದವಿಯಾಗಿದ್ದು, ಯಂತ್ರಗಳು ಹೇಗೆ ಕಾರ್ಯನಿರ್ವಹಿಸುತ್ತವೆ, ಅವುಗಳನ್ನು ಹೇಗೆ ವಿನ್ಯಾಸಗೊಳಿಸಲಾಗಿದೆ ಮತ್ತು ಅವು ಆಟೋಮೋಟಿವ್‌ನಿಂದ ಏರೋಸ್ಪೇಸ್‌ನಿಂದ ಇಂಧನದವರೆಗೆ ಬಹುತೇಕ ಪ್ರತಿಯೊಂದು ಉದ್ಯಮಕ್ಕೂ ಹೇಗೆ ಶಕ್ತಿ ನೀಡುತ್ತವೆ ಎಂಬುದನ್ನು ಕಲಿಸುತ್ತದೆ. ಇದು ಥರ್ಮೋಡೈನಾಮಿಕ್ಸ್, ದ್ರವ ಯಂತ್ರಶಾಸ್ತ್ರ, ಯಂತ್ರ ವಿನ್ಯಾಸ, ವಸ್ತುಗಳ ಶಕ್ತಿ, ಅಂಆ ಪರಿಕರಗಳು ಇತ್ಯಾದಿಗಳಂತಹ ಪ್ರಮುಖ ವಿಷಯಗಳನ್ನು ಒಳಗೊಂಡಿದೆ. ಈ ಕೋರ್ಸ್ ನಿಮಗೆ ರೊಬೊಟಿಕ್ಸ್, ನವೀಕರಿಸಬಹುದಾದ ಶಕ್ತಿ ಅಥವಾ ಕಂಪ್ಯೂಟೇಶನಲ್ ವಿನ್ಯಾಸದಂತಹ ವೇಗವಾಗಿ ಬೆಳೆಯುತ್ತಿರುವ ಕ್ಷೇತ್ರಗಳಲ್ಲಿ ಪರಿಣತಿ ಪಡೆಯಲು ಅನುವು ಮಾಡಿಕೊಡುತ್ತದೆ. ಕೋರ್ಸ್‌ನ ಅಂತ್ಯದ ವೇಳೆಗೆ, ನೀವು ನೈಜ ಯೋಜನೆಗಳಲ್ಲಿ ಕೆಲಸ ಮಾಡಲು, ಸ್ಮಾರ್ಟ್ ವ್ಯವಸ್ಥೆಗಳನ್ನು ನಿರ್ಮಿಸಲು ಮತ್ತು ಯಾಂತ್ರಿಕ ವ್ಯವಸ್ಥೆಗಳಲ್ಲಿ ಕಾರ್ಯನಿರ್ವಹಿಸುವ ಕೈಗಾರಿಕೆಗಳಲ್ಲಿನ ಪ್ರಾಯೋಗಿಕ ಸಮಸ್ಯೆಗಳನ್ನು ಪರಿಹರಿಸಲು ಸಿದ್ಧರಾಗಿರುತ್ತೀರಿ.

ಬಿ.ಟೆಕ್. ಮೆಕ್ಯಾನಿಕಲ್ ಎಂಜಿನಿಯರಿಂಗ್ ಕೋರ್ಸ್‌ನ ಅವಧಿ

ಬಿ.ಟೆಕ್. ಮೆಕ್ಯಾನಿಕಲ್ ಎಂಜಿನಿಯರಿಂಗ್ 4 ವರ್ಷಗಳ ಪೂರ್ಣಾವಧಿಯ ಪದವಿಪೂರ್ವ ಪದವಿಯಾಗಿದೆ. ಕೋರ್ಸ್ ಅನ್ನು 8 ಸೆಮಿಸ್ಟರ್‌ಗಳಾಗಿ ವಿಂಗಡಿಸಲಾಗಿದೆ. ಪ್ರತಿ ಸೆಮಿಸ್ಟರ್ ಸಿದ್ಧಾಂತ, ಪ್ರಯೋಗಾಲಯ ಕೆಲಸ ಮತ್ತು ಯೋಜನೆಗಳ ಮಿಶ್ರಣವನ್ನು ಒಳಗೊಂಡಿದೆ. ನಿಮಗೆ ತಾಂತ್ರಿಕ ಜ್ಞಾನ, ಪ್ರಾಯೋಗಿಕ ಕೌಶಲ್ಯಗಳು ಮತ್ತು ಸಮಸ್ಯೆ-ಪರಿಹರಿಸುವ ಸಾಮರ್ಥ್ಯಗಳನ್ನು ನೀಡಲು ರಚನೆಯನ್ನು ನಿರ್ಮಿಸಲಾಗಿದೆ. ಮೆಕ್ಯಾನಿಕಲ್ ಎಂಜಿನಿಯರಿಂಗ್ ಎಂಜಿನಿಯರಿಂಗ್‌ನ ಅತ್ಯಂತ ವಿಶ್ವಾಸಾರ್ಹ ಮತ್ತು ಭವಿಷ್ಯಕ್ಕೆ ಸಿದ್ಧವಾಗಿರುವ ಶಾಖೆಗಳಲ್ಲಿ ಒಂದಾಗಿದೆ. ಇದು ನಿಮಗೆ ಯಂತ್ರಗಳನ್ನು ವಿನ್ಯಾಸಗೊಳಿಸಲು, ಇಂಧನ ವ್ಯವಸ್ಥೆಗಳನ್ನು ನಿರ್ಮಿಸಲು ಮತ್ತು ಜಗತ್ತನ್ನು ಚಲಿಸುವಂತೆ ಮಾಡುವ ತಂತ್ರಜ್ಞಾನವನ್ನು ಅಭಿವೃದ್ಧಿಪಡಿಸಲು ಕೌಶಲ್ಯಗಳನ್ನು ನೀಡುತ್ತದೆ. ಎಂಜಿನ್ ಕಾರ್ಯಕ್ಷಮತೆಯನ್ನು ಸುಧಾರಿಸುವುದು, ಚುರುಕಾದ ರೋಬೋಟ್‌ಗಳನ್ನು ರಚಿಸುವುದು ಅಥವಾ ಶುದ್ಧ ಇಂಧನ ಪರಿಹಾರಗಳನ್ನು ನಿರ್ಮಿಸುವಂತಹ ನಿಜವಾದ ಸವಾಲುಗಳ ಮೇಲೆ ನೀವು ಕೆಲಸ ಮಾಡಬಹುದು. ಆಟೋಮೋಟಿವ್ ಮತ್ತು ಏರೋಸ್ಪೇಸ್‌ನಿಂದ ನವೀಕರಿಸಬಹುದಾದ ಇಂಧನ ಮತ್ತು ಆರೋಗ್ಯ ರಕ್ಷಣೆಯವರೆಗೆ ಕೈಗಾರಿಕೆಗಳಲ್ಲಿ ಈ ಕ್ಷೇತ್ರಕ್ಕೆ ಹೆಚ್ಚಿನ ಬೇಡಿಕೆಯಿದೆ. ಈ ಪದವಿಯೊಂದಿಗೆ, ನೀವು ವೈವಿಧ್ಯಮಯ ಪಾತ್ರಗಳನ್ನು ಅನ್ವೇಷಿಸಬಹುದು, ಅರ್ಥಪೂರ್ಣ ಸಮಸ್ಯೆಗಳನ್ನು ಪರಿಹರಿಸಬಹುದು ಮತ್ತು ದೀರ್ಘಕಾಲೀನ ಬೆಳವಣಿಗೆಯೊಂದಿಗೆ ವೃತ್ತಿಜೀವನವನ್ನು ನಿರ್ಮಿಸಬಹುದು. ವ್ಯವಸ್ಥೆಗಳನ್ನು ಸುರಕ್ಷಿತ, ಹೆಚ್ಚು ಪರಿಣಾಮಕಾರಿ ಮತ್ತು ಹೆಚ್ಚು ಸುಸ್ಥಿರವಾಗಿಸುವಲ್ಲಿ ಮೆಕ್ಯಾನಿಕಲ್ ಎಂಜಿನಿಯರ್‌ಗಳು ನೇರ ಪಾತ್ರ ವಹಿಸುತ್ತಾರೆ, ಇದು ಇಂದು ಎಂದಿಗಿಂತಲೂ ಹೆಚ್ಚು ಮುಖ್ಯವಾಗಿದೆ.ಭೌತಶಾಸ್ತ್ರ, ರಸಾಯನಶಾಸ್ತ್ರ ಮತ್ತು ಗಣಿತದೊಂದಿಗೆ 10+2. 12ನೇ ತರಗತಿಯಲ್ಲಿ 60–75% ಅಂಕಗಳು. ಪ್ರವೇಶ ಪರೀಕ್ಷೆಯ ಅಂಕ.

## ವಿಜಯ್ ಸುನಾಮಿಗೆ ಕೊಚ್ಚಿಹೋದ ಡಿಎಂಕೆ ಕುಟುಂಬ ರಾಜಕೀಯ

ನೈಜ್ಯ ದೆಸೆ ನ್ಯೂಸ್

**ಚನ್ನೈ: ಶಿಷ್ಟಾಚಾರಕ್ಕೆ ತಿಲಾಂಜಲಿ ಹಾಡಿ ರಾಜ್ಯದಲ್ಲಿ ಮತ್ತೆ ಎರಡನೇ ಬಾರಿಗೆ ಅಧಿಕಾರ ಹಿಡಿಯುತ್ತೇವೆ ಎಂಬ ಅತಿಯಾದ ಆತವಿಶ್ವಾಸದಲ್ಲಿದ್ದ ಡಿಎಂಕೆ ಸೋಲು ಕುಟುಂಬ ವ್ಯಾಮೋಹವೇ ಕಾರಣ ಎನ್ನಲಾಗುತ್ತಿದೆ. ಜನಪರ ಯೋಜನೆಗಳ ಅನುಷ್ಠಾನದ ಹೊರತಾಗಿಯೂ ಡಿಎಂಕೆ ಇಷ್ಟು ಹೀನಾಯವಾಗಿ ಸೋಲುತ್ತದೆ ಎಂದು ಯಾವ ರಾಜಕೀಯ ಪಂಡಿತರೂ ಕೂಡ ಲೆಕ್ಕಾಚಾರ ಹಾಕಿರಲಿಲ್ಲ.**



ಇತ್ತೀಚೆಗೆ ಬಿಡುಗಡೆಯಾದ ಸಮೀಕ್ಷೆಗಳೂ ಕೂಡಾ ಡಿಎಂಕೆ ರಾಜ್ಯದಲ್ಲಿ ಮತ್ತೆ ಅಧಿಕಾರಕ್ಕೆ ಬಂದೇ ಬರುತ್ತದೆ ಎಂಬ ಭವಿಷ್ಯ ನುಡಿದಿದ್ದವು. ಆದರೆ ಪ್ರಕಟಗೊಂಡ ಫಲಿತಾಂಶದಲ್ಲಿ ಎಲ್ಲವೂ ತಿರುವುಮುರುವಾಗಿದೆ. ಡಿಎಂಕೆ ಸೋಲಿಗೆ ಕಾರಣ ಹುಡುಕುತ್ತಾ ಹೋದರೆ ಅದಕ್ಕೆ ನೂರಾರು ನಿದರ್ಶನಗಳನ್ನು ನೀಡಬಹುದು ಎಂದು ಪಕ್ಷದ ಕಾರ್ಯಕರ್ತರೇ ಹೇಳುತ್ತಿದ್ದಾರೆ. ವಿಜಯ್ ಅವರ ಟಿವಿಕೆ ಪಕ್ಷದ ಸುನಾಮಿ: ನಟ ವಿಜಯ್ ಅವರ ಟಿವಿಕೆ ಪಕ್ಷವು ಡಿಎಂಕೆಯ ಸಾಂಪ್ರದಾಯಿಕ ಯುವ ಮತದಾರರನ್ನು ಮತ್ತು ಹೊಸ ಮತದಾರರನ್ನು ತನ್ನತ್ತ ಸೆಳೆಯುವಲ್ಲಿ ಯಶಸ್ವಿಯಾಗಿದೆ. ಇದು ಡಿಎಂಕೆಯ ವೋಟ್ ಬ್ಯಾಂಕ್ ಅನ್ನು ಸುಮಾರು ಶೇ.15 ರಿಂದ ಶೇ.20 ರಷ್ಟು ಕಬಳಿಸಿದ್ದು, ಮೈತ್ರಿಕೂಟದ ಗೆಲುವಿನ ಅಂತರವನ್ನು ಕಡಿಮೆ ಮಾಡಿದೆ. ಆಡಳಿತ ವಿರೋಧಿ ಅಲೆ ಮತ್ತು ಭ್ರಷ್ಟಾಚಾರದ ಆರೋಪ: ಕಳೆದ ಐದು ವರ್ಷಗಳ ಆಡಳಿತದಲ್ಲಿ ಸಚಿವರ ಮೇಲಿನ ಅಕ್ರಮ ಹಣ ವರ್ಗಾವಣೆ ಪ್ರಕರಣಗಳು ಮತ್ತು ಭ್ರಷ್ಟಾಚಾರದ ಆರೋಪಗಳನ್ನು ಪ್ರತಿಪಕ್ಷಗಳು ಸರಿಯಾಗಿ ಬಳಸಿಕೊಂಡಿವೆ. ಅದರಲ್ಲೂ ಕಾನೂನು ಸುವ್ಯವಸ್ಥೆ ಮತ್ತು ಬೆಲೆ ಏರಿಕೆ ವಿಚಾರಗಳು ಸಾಮಾನ್ಯ ಜನರ ಅಸಮಾಧಾನಕ್ಕೆ ಕಾರಣವಾಗಿವೆ. ಮೈತ್ರಿಕೂಟದ ಒಳಗಿನ ಬಿರುಕು: ಕಾಂಗ್ರೆಸ್ ಮತ್ತು ಡಿಎಂಕೆ ನಡುವೆ ಸೀಟು ಹಂಚಿಕೆ ವಿಚಾರದಲ್ಲಿ ಉಂಟಾದ ಭಿನ್ನಮತವು ಈ ಬಾರಿ ಬಹಿರಂಗವಾಗಿತ್ತು. ಕಾಂಗ್ರೆಸ್ ಹೆಚ್ಚಿನ ಸೀಟುಗಳಿಗೆ ಬೇಡಿಕೆ ಇಟ್ಟಿದ್ದರೂ ಡಿಎಂಕೆ ಕೇವಲ 25 ಸ್ಥಾನಗಳನ್ನು ನೀಡಿದ್ದು, ಇದು ಮೈತ್ರಿಕೂಟದ ಕಾರ್ಯಕರ್ತರ ನಡುವಿನ ಒಗ್ಗಟ್ಟಿನ ಮೇಲೆ ಪರಿಣಾಮ ಬೀರಿದೆ. ಕುಟುಂಬ ರಾಜಕಾರಣದ ಟೀಕೆ: ಉದಯನಿಧಿ ಸ್ಟಾಲಿನ್ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡಿದ್ದು ಮತ್ತು ಪಕ್ಷದಲ್ಲಿ ಕೇವಲ ಕುಟುಂಬದ ಸದಸ್ಯರಿಗೆ ಆದ್ಯತೆ ನೀಡಲಾಗುತ್ತಿದೆ.

## ಅಸ್ಸಾಂನಲ್ಲಿ ಬಿಜೆಪಿ ಹ್ಯಾಟ್ರಿಕ್ : ಕೇರಳಂನಲ್ಲಿ ಯುಡಿಎಫ್, ಪುದುಚೇರಿಯಲ್ಲಿ ಎನ್‌ಡಿಎ

ನೈಜ್ಯ ದೆಸೆ ನ್ಯೂಸ್

**ನವದೆಹಲಿ: ದೇಶದ ನಾಲ್ಕು ರಾಜ್ಯಗಳು ಮತ್ತು ಒಂದು ಕೇಂದ್ರಾಡಳಿತ ಪ್ರದೇಶದ ವಿಧಾನಸಭೆ ನಡೆದ ಚುನಾವಣೆಯಲ್ಲಿ ಅಸ್ಸಾಂನಲ್ಲಿ ಬಿಜೆಪಿ, ಕೇರಳದಲ್ಲಿ ಕಾಂಗ್ರೆಸ್ ನೇತೃತ್ವದ ಯುಡಿಎಫ್ ಹಾಗು ಪುದುಚೆರಿಯಲ್ಲಿ ಎನ್‌ಡಿಎ ಅಧಿಕಾರ ಹಿಡಿದಿದೆ.**

ತೀವ್ರ ಕುತೂಹಲ ಕೆರಳಿಸಿದ್ದ ನಾಲ್ಕು ರಾಜ್ಯಗಳು ಮತ್ತು ಒಂದು ಕೇಂದ್ರಾಡಳಿತ ಪ್ರದೇಶದ ವಿಧಾನಸಭೆಗೆ ನಡೆದ ಮತ ಎಣಿಕೆ ಪ್ರಗತಿಯಲ್ಲಿದ್ದು ಸ್ಪಷ್ಟ ಬಹುಮತದೊಂದಿಗೆ ಅಧಿಕಾರ ಹಿಡಿಯುವತ್ತೆ ಹೆಜ್ಜೆ ಇಟ್ಟಿದೆ

**ಯುಡಿಎಫ್ ಕಮಾಲ್ :** ಕೇರಳಂನಲ್ಲಿ ಕಳೆದ ಮೂರು ಅವಧಿಯಿಂದ ಅಧಿಕಾರದಲ್ಲಿದ್ದ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ನೇತೃತ್ವದ ಎಡರಂಗದ ಎಲ್‌ಡಿಎಫ್ ಪಕ್ಷದಿಂದ ಅಧಿಕಾರ ಕಸಿದು ಕಾಂಗ್ರೆಸ್ ನೇತೃತ್ವದ ಯುಡಿಎಫ್ ಕಮಾಲ್ ಮಾಡಿದೆ.



ಸದ್ಯದ ಮುನ್ನಡೆ ಪ್ರಕಾರ ಯುಡಿಎಫ್ 140 ವಿಧಾನಸಭಾ ಕ್ಷೇತ್ರಗಳ ಪೈಕಿ ಬಹುಮತಕ್ಕೆ ಅಗತ್ಯವಿರುವ 71 ಸ್ಥಾನಗಳನ್ನು ದಾಟಿ 99 ಸ್ಥಾನಗಳಲ್ಲಿ ಮುನ್ನಡೆ ಗಳಿಸಿದೆ. ಎಲ್ ಡಿಎಫ್ 39 , ಬಿಜೆಪಿ- 2 ಮತ್ತು ಇತರರು 12 ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸಿದೆ.

**ಅಸ್ಸಾಂನಲ್ಲಿ ಮತ್ತೆ ಬಿಜೆಪಿ :** ಕಳೆದ ಎರಡು ಅವಧಿಯಿಂದ ಅಧಿಕಾರದಲ್ಲಿರುವ ಬಿಜೆಪಿ ಅಸ್ಸಾಂನಲ್ಲಿ ಮೂರನೇ ಬಾರಿಗೆ ಅಧಿಕಾರ ಹಿಡಯುವತ್ತ ಹೆಜ್ಜೆ ಹಾಕಿದೆ, 126 ವಿಧಾನಸಭಾ ಕ್ಷೇತ್ರಗಳ ಪೈಕಿ ಬಹುಮತಕ್ಕೆ ಅಗತ್ಯವಾಗಿರುವ 64 ಸ್ಥಾನಗಳನ್ನು ದಾಟಿ 100 ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸುವ ಮೂಲಕ ಹ್ಯಾಟ್ರಿಕ್ ಜಯಭೇರಿ ಬಾರಿಸಿದೆ. ಕಾಂಗ್ರೆಸ್ ಅಧಿಕಾರ ಹಿಡಿಯಬೇಕು ಎನ್ನವು ಆಸೆ ನಿರಾಸೆಯಾಗಿದೆ. ಕೇವಲ 26 ಸ್ಥಾನಗಳಿಗಷ್ಟೇ ಶಕ್ತಿವಾಗಿದೆ, ಎಐಡಿಎಫ್ 2, ಮತ್ತು ಇತರರು ಒಂದು ಕ್ಷೇತ್ರದಲ್ಲಿ ಮುನ್ನಡೆ ಸಾಧಿಸಿದ್ದಾರೆ.

ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಮತ್ತೊಮ್ಮೆ ಈಶಾನ್ಯ ರಾಜ್ಯ ಅಸ್ಸಾಂನಲ್ಲಿ ಮೋಡಿ ಮಾಡಿದ್ದಾರೆ

**ಪುದುಚೆರಿಯಲ್ಲಿ ಎನ್‌ಡಿಎ:** ಪುದುಚೆರಿಯಲ್ಲಿ ಎನ್ ಡಿಎ ನೇತೃತ್ವದ ಮೈತ್ರಿಕೂಟ ಮತ್ತೊಮ್ಮೆ ಅಧಿಕಾರ ಹಿಡಿಯುವತ್ತ ಹೆಜ್ಜೆ ಇಟ್ಟಿದೆ, 30 ಕ್ಷೇತ್ರಗಳ ಪೈಕಿ ಆಡಳಿತಾರೂಢ ಎನ್ ಆರ್ ಸಿ 15 ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸಿದ ಅಧಿಕಾರ ಹಿಡಿಯುವತ್ತ ಹೆಜ್ಜೆ ಇಟ್ಟಿದೆ, ಕಾಂಗ್ರೆಸ್ 11 ಮತ್ತು ಹಾಗೂ ಇತರರು ಮೂರು ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸಿದ್ದಾರೆ.

# ಯುದ್ಧಾಂತ್ಯಕ್ಕೆ ಇರಾನ್ ಉತ್ಸುಕ

ನೈಜ್ಯ ದೆಸೆ ನ್ಯೂಸ್

**ಟೆಹರಾನ್: ಪಾಕಿಸ್ತಾನದ ಮೂಲಕ ಕಳುಹಿಸಲಾದ 14 ಅಂಶಗಳ ಪ್ರಸ್ತಾವನೆಗೆ ಅಮೆರಿಕದ ಪ್ರತಿಕ್ರಿಯೆ ಬಂದಿದ್ದು ಉಭಯ ದೇಶಗಳ ನಡುವಿನ ಸಮಸ್ಯೆಗಳನ್ನು 30 ದಿನಗಳಲ್ಲಿ ಪರಿಹರಿಸಬೇಕು ಮತ್ತು ಕದನ ವಿರಾಮ ವಿಸ್ತರಿಸುವ ಬದಲು ಯುದ್ಧ ಕೊನೆಗೊಳಿಸುವ ಗುರಿ ಹೊಂದಿದಲಾಗಿದೆ ಎಂದು ಇರಾನ್ ತಡರಾತ್ರಿ ತಿಳಿಸಿದೆ.**

ಇರಾನ್‌ನ ಪ್ರಸ್ತಾವನೆಗೆ ಅಮೆರಿಕ ತನ್ನ ಪ್ರತಿಕ್ರಿಯೆಯನ್ನು ಪಾಕಿಸ್ತಾನದ ಮೂಲಕ ತಿಳಿಸಿದೆ ಮತ್ತು ಇರಾನ್ ಈಗ ಅದನ್ನು ಪರಿಶೀಲಿಸುತ್ತಿದೆ ಎಂದು ಇರಾನ್‌ನ ಸರ್ಕಾರಿ ಮಾಧ್ಯಮ ವರದಿ ಮಾಡಿದೆ. ಅಮೆರಿಕದ ಪ್ರತಿಕ್ರಿಯೆಯ ಬಗ್ಗೆ ಅಮೇರಿಕಾ ಅಥವಾ ಪಾಕಿಸ್ತಾನದಿಂದ ಯಾವುದೇ ಸ್ಪಷ್ಟನೆ ಬಂದಿಲ್ಲ.



ಇರಾನ್‌ನ ವಿದೇಶಾಂಗ ಸಚಿವಾಲಯದ ವಕ್ತಾರ ಎಸ್ಮಾಯಿಲ್ ಬಘೈ ಪ್ರತಿಕ್ರಿಯಿಸಿ "ಈ ಹಂತದಲ್ಲಿ ಪರಮಾಣು ಮಾತುಕತೆ ನಡೆಸುವುದಿಲ್ಲ ಎಂದು ಹೊಂದಿಲ್ಲ", ಯುದ್ಧ ಮುಗಿಯುವವರೆಗೆ ಪರಮಾಣು ವಿಷಯಗಳ ಕುರಿತು ಮಾತುಕತೆಗಳನ್ನು ಬದಿಗಿಡುವ ಇರಾನ್‌ನ ಪ್ರಸ್ತಾಪ ಸ್ಪಷ್ಟವಾಗಿದೆ ಎಂದಿದ್ದಾರೆ.

ಇದಕ್ಕೂ ಮೊದಲು, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪ್ರಸ್ತಾಪವನ್ನು ಪರಿಶೀಲಿಸುತ್ತಿರುವುದಾಗಿ ಹೇಳಿದ್ದರು ಆದರೆ ಅದು ಒಪ್ಪಂದಕ್ಕೆ ಕಾರಣವಾಗುತ್ತದೆಯೇ ಎಂದು ಅನುಮಾನ ವ್ಯಕ್ತಪಡಿಸಿದ್ದರು. ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು ಇಸ್ಲಾಮಿಕ್ ಕ್ರಾಂತಿಯ ನಂತರ ಕಳೆದ 47 ವರ್ಷಗಳಲ್ಲಿ ಮಾನವೀಯತೆ ಮತ್ತು ಜಗತ್ತಿಗೆ ಮಾಡಿದ್ದಕ್ಕೆ ಇನ್ನೂ ಸಾಕಷ್ಟು ದೊಡ್ಡ ಬೆಲೆಯನ್ನು ಪಾವತಿಸಿಲ್ಲ" ಎಂದು ಹೇಳಿದ್ದರು. ಇರಾನ್‌ನ ರಾಜ್ಯ-ಸಂಬಂಧಿತ ಮಾಧ್ಯಮಗಳ ಪ್ರಕಾರ, ಉಭಯ ದೇಶಗಳ ನಡುವಿನ ಸಮಸ್ಯೆಗಳನ್ನು 30 ದಿನಗಳಲ್ಲಿ ಪರಿಹರಿಸಬೇಕು ಮತ್ತು ಕದನ ವಿರಾಮ ವಿಸ್ತರಿಸುವ ಬದಲು ಯುದ್ಧ ಕೊನೆಗೊಳಿಸುವ ಗುರಿಯನ್ನು ಹೊಂದಿದೆ ಎಂದು ಇರಾನ್ ಖಚಿತಪಡಿಸಿದೆ.

ಅಮೆರಿಕ ಮತ್ತು ಇಸ್ರೇಲ್ ನಾಲ್ಕು ವಾರಗಳ ಹಿಂದೆ ಇರಾನ್ ವಿರುದ್ಧದ ಬಾಂಬ್ ದಾಳಿ ಕಾರ್ಯಾಚರಣೆ ಸ್ಥಗಿತಗೊಳಿಸಿದವು ಮತ್ತು ಅಮೆರಿಕ ಮತ್ತು ಇರಾನಿನ ಅಧಿಕಾರಿಗಳು ಒಂದು ಸುತ್ತಿನ ಮಾತುಕತೆ ನಡೆಸಿದೆ. ಆದರೆ ಮುಂದಿನ ಸಭೆಗಳನ್ನು ಏರ್ಪಡಿಸುವ ಪ್ರಯತ್ನಗಳು ಇಲ್ಲಿಯವರೆಗೆ ವಿಫಲವಾಗಿವೆ ಎಂದು ಹೇಳಲಾಗಿದೆ. ಇರಾನ್‌ನ ಇತ್ತೀಚಿನ ಪ್ರಸ್ತಾವನೆಯನ್ನು ಅಮೆರಿಕಕ್ಕೆ ಹಸ್ತಾಂತರಿಸಿದ್ದು, ಇರಾನ್‌ನ ಪರಮಾಣು ಕಾರ್ಯಕ್ರಮದ ಕುರಿತು ಮಾತುಕತೆಗಳನ್ನು ಕೈಬಿಡುವಾಗ, ಯುದ್ಧ ಕೊನೆಗೊಳಿಸಿ ಹಡಗು ಬಿಕ್ಕಟ್ಟನ್ನು ಮೊದಲು ಪರಿಹರಿಸುವ ಉದ್ದೇಶವನ್ನು ಇರಾನ್ ಹೊಂದಿದೆ ಎಂದು ತಿಳಿಸಿದ್ದಾರೆ.

## ದಾವಣಗೆರೆ ಉಪ ಕದನ : ಗೆದ್ದ ಕಾಂಗ್ರೆಸ್, ಸೋತ ಅಲ್ಪಸಂಖ್ಯಾತರು

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು; ಸವಾಲು ಹಾಕಿದಂತೆ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯಲ್ಲಿ ಅಲ್ಪಸಂಖ್ಯಾತರಿಗೆ ಕಾಂಗ್ರೆಸ್ ಮಣಿಸಲು ಸಾಧ್ಯವಾಗಿಲ್ಲ. ಅಲ್ಪಸಂಖ್ಯಾತ ಮುಖಂಡರ ಅಸಮಾಧಾನ, ವಿರೋಧ, ಮುನಿಸಿನ ನಡುವೆಯೂ ಕಾಂಗ್ರೆಸ್ ಜಯ ಗಳಿಸಿದೆ. ಆದರೆ, ಕಾಂಗ್ರೆಸ್‌ಗೆ ಪಾಠ ಕಲಿಸುವ ಬೆದರಿಕೆ ಹಾಕಿದ್ದ ಅಲ್ಪ ಸಂಖ್ಯಾತರೇ ಸೋತು ಪಾಠ ಕಲಿತಂತಾಗಿದೆ.**

ಅಲ್ಪ ಸಂಖ್ಯಾತರ ನಿರೀಕ್ಷಿತ ಬೆಂಬಲ ದೊರೆಯದಿದ್ದರೂ ಗೆಲ್ಲಬಹದು ಎಂಬುದನ್ನು ಕಾಂಗ್ರೆಸ್‌ಗೆ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆ ಫಲಿತಾಂಶವು ದಾರಿ ತೋರಿಸಿಕೊಟ್ಟಿದೆ. ಅಲ್ಪಸಂಖ್ಯಾತ ಮುಖಂಡರ ಅಸಮಾಧಾನದ ನಡುವೆಯೂ ಈ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಶಮನೂರು ಮಲ್ಲಿಕಾರ್ಜುನ ಅವರು 69,578 ಮತಗಳನ್ನು ಪಡೆದು ಬಿಜೆಪಿ 5,708 ಮತಗಳ ಅಂತರದಿಂದಗೆಲುವು ಸಾಧಿಸಿದ್ದಾರೆ. ಮಾಜಿ ಸಚಿವ ಶಾಮನೂರು ಶಿವಶಂಕರಪ್ಪ ಅವರು ಕಳೆದ ಚುನಾವಣೆಯಲ್ಲಿ 84,298 ಮತಗಳನ್ನು ಪಡೆದು, 27,880 ಮತಗಳ ಅಂತರದಿಂದ ಚುನಾಯಿತರಾಗಿದ್ದರು.ಚುನಾವಣೆ ಪ್ರಚಾರದ ಸಂದರ್ಭದಲ್ಲಿ ಕೆಲವು ಅಲ್ಪಸಂಖ್ಯಾತರು ಪ್ರಚಾರದಿಂದ ದೂರ ಸರಿದ ಪರಿಣಾಮ ನಿರೀಕ್ಷೆಯಂತೆ ಕಾಂಗ್ರೆಸ್‌ಗೆ ಗೆಲುವಿನ ಅಂತರ ಕಡಿಮೆಯಾಗಿದೆ.

ಕೊನೆ ಘಳಿಗೆಯಲ್ಲಿ ಸಚಿವ ಜಮೀರ್ ಅಹದ್ ಖಾನ್ ಪ್ರಚಾರದಲ್ಲಿ ಭಾಗಿಯಾದದ್ದು, ಅಲ್ಪಸಂಖ್ಯಾತರ ಅಸಮಧಾನ ಕಡಿಮೆಯಾಗಲು



ಸಹಕಾರಿಯಾಗಿತ್ತು. ಚುನಾವಣೆಯಲ್ಲಿ ಅಲ್ಪಸಂಖ್ಯಾತರಿಗೆ ಟಿಕೆಟ್ ನೀಡಬೇಕು ಎಂದು ಪಟ್ಟು ಹಿಡಿದು ಆ ಸಮುದಾಯದ ಮುಖಂಡರು ಆಗ್ರಹಿಸಿದ್ದರು. ಆದರೆ, ಆಡಳಿತಾರೂಢ ಕಾಂಗ್ರೆಸ್ ಪಕ್ಷದ ವರಿಷ್ಠರು ಅಲ್ಪಸಂಖ್ಯಾತರ ಬೇಡಿಕೆಯನ್ನು ಪರಿಗಣಿಸದೇ ಸಮರ್ಥ್ ಅವರನ್ನು ಅಭ್ಯರ್ಥಿಯನ್ನಾಗಿ ಘೋಷಿಸಿ ಚುನಾವಣಾ ಕಣಕ್ಕಿಳಿಸಿತ್ತು.

ಇದು ತೀವ್ರ ಸಮಾಧಾನಕ್ಕೆ ಕಾರಣವಾಗಿ ಉಪಚುನಾವಣೆಯಲ್ಲಿ ಕಾಂಗ್ರೆಸ್‌ಗೆ ತಕ್ಕ ಪಾಠ ಕಲಿಸುವುದಾಗಿ ಹೇಳಿದ್ದರು. ಅಲ್ಪಸಂಖ್ಯಾತರ ನಡವಳಿಕೆಯಿಂದ ಬೇಸತ್ತ ಕಾಂಗ್ರೆಸ್ ಅವರ ಮುಖಂಡರ ವಿರುದ್ಧ ಶಿಸ್ತುಕ್ರಮವನ್ನು ಕೈಗೊಂಡಿತ್ತು. ಇದು ರಾಜ್ಯ ಕಾಂಗ್ರೆಸ್‌ನಲ್ಲಿ ಆತಂಕರಿಕವಾಗಿ ತೀವ್ರ ಅಸಮಾಧಾನಕ್ಕೆ ಕಾರಣವಾಗಿತ್ತು. ಅಲ್ಲದೆ, ರಾಜಕೀಯ ಚರ್ಚೆಗೂ ಎಡೆಮಾಡಿಕೊಟ್ಟಿತ್ತು. ಸಂಧಾನ ಸಭೆಗಳನ್ನು ನಡೆಸಲಾಗಿತ್ತು. ಈ ಉಪ ಚುನಾವಣೆಯಲ್ಲಿ ಎಸ್‌ಡಿಪಿಐ ಮತ್ತು ವಿವಿಧ ಪಕ್ಷಗಳ ಅಭ್ಯರ್ಥಿಗಳು ಸೇರಿದಂತೆ ಒಟ್ಟು 14 ಅಲ್ಪಸಂಖ್ಯಾತ ಸಮುದಾಯದ ಅಭ್ಯರ್ಥಿಗಳು ಚುನಾವಣಾ ಕಣದಲ್ಲಿದ್ದರು. ಒಟ್ಟಾರೆ ಪಡೆದ ಮತಗಳು 25 ಸಾವಿರ ಗಡಿ ದಾಟಲಿಲ್ಲ. ಎಸ್‌ಡಿಪಿಐ ಅಭ್ಯರ್ಥಿ ಅಫ್ಸರ್ ಕೊಡ್ಲಿಪೇಟೆ 18,975 ಮತಗಳನ್ನು ಪಡೆದು ಗಮನ ಸೆಳೆದಿದ್ದಾರೆ.

ಚುನಾವಣಾ ಆಯೋಗದ ಮಾಹಿತಿ ಪ್ರಕಾರ, ಪಕ್ಷೇತರರಾಗಿ ಸ್ಪರ್ಧಿಸಿದ್ದ ಡಿ.ಸೈಯದ್ ರಿಯಾಜ್ 1186 ಮತಗಳು ಹಾಗೂ ಖಾದರ ಅದಿಲ್ ಬಾಷ 1082 ಮತಗಳನ್ನು ಪಡೆದು ಮೂರಂಕಿಯ ಮತಗಳನ್ನು ಪಡೆದಿದ್ದಾರೆ. ಮನ್ಸೂರ್ ಅಲಿ ಎಂ. 477 ಮತಗಳು, ಟಿ.ಜಬೀನ ಅಪ 335 ಮತ್ತು ಕೆ.ಎಚ್.ಮಹಬೂಬ್ 225 ಮತಗಳನ್ನು ಪಡೆದು ಮೂರಂಕಿಯ ಮತ ಪಡೆದವರು ಎನಿಸಿಕೊಂಡರು. ಉಳಿದ 8 ಮಂದಿ ಅಭ್ಯರ್ಥಿಗಳು ಕೇವಲ ಎರಡಂಕಿ ಮತಗಳನ್ನು ಪಡೆಯುವಲ್ಲಿ ತೃಪ್ತರಾಗಿದ್ದಾರೆ. ಅವರು ಪಡೆದ ಒಟ್ಟು ಮತಗಳು 570 ಆಗಿದೆ. ಆದರೆ, ನೋಟಾಗೆ 511 ಮತಗಳು ಚಲಾವಣೆಯಾಗಿವೆ. ಅಲ್ಪ ಸಂಖ್ಯಾತ ಮತಗಳು ಕ್ಷೇತ್ರದಲ್ಲಿ ಸಾಕಷ್ಟಿದ್ದರೂ, ಕಾಂಗ್ರೆಸ್‌ನ ಹೊರತಾಗಿ ಬೇರೆ ಪಕ್ಷದ ಕಡೆ ಹೆಚ್ಚು ವಾಲಿದಂತೆ ತೋರುತ್ತಿಲ್ಲ. ಅಲ್ಪಸಂಖ್ಯಾತ ಸಮುದಾಯದ ಅಭ್ಯರ್ಥಿಗಳಿ ಒಟ್ಟಾರೆ ಸುಮಾರು 22,800 ಮತಗಳು ದೊರೆತಂತಾಗಿದೆ. ಒಟ್ಟಾರೆ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯಲ್ಲಿ ಮಾಜಿ ಸಚಿವ ದಿವಂಗತ ಶಾಮನೂರು ಶಿವಶಂಕರಪ್ಪ ಅವರ ಕುಟುಂಬದ ಚುನಾವಣಾ ತಂತ್ರಗಾರಿಕೆಯ ಮುಂದೆ ಅಲ್ಪಸಂಖ್ಯಾತರ ಆಟ ನಡೆಯಲಿಲ್ಲ ಎಂದೇ ರಾಜಕೀಯ ವಲಯದಲ್ಲಿ ವ್ಯಾಖ್ಯಾನಿಸಲಾಗುತ್ತಿದೆ.

## ಅಟ್ಲಾಂಟಿಕ್ ಮಹಾಸಾಗರದಲ್ಲಿ ಕ್ರೂಸ್ ಹಡಗಿನಲ್ಲಿ ಹ್ಯಾಂಟವೈರಸ್‌ಗೆ ಮೂವರ ಬಲಿ

ನೈಜ್ಯ ದೆಸೆ ನ್ಯೂಸ್

**ಕೇಪ್ ಟೌನ್: ಅಟ್ಲಾಂಟಿಕ್ ಮಹಾಸಾಗರದಲ್ಲಿ ಕ್ರೂಸ್ ಹಡಗಿನಲ್ಲಿ ಅಪರೂಪದ ಹ್ಯಾಂಟವೈರಸ್ ಸೋಂಕಿಗೆ ವೃದ್ಧ ದಂಪತಿಗಳು ಸೇರಿದಂತೆ ಮೂವರು ಬಲಿಯಾಗಿದ್ದಾರೆ ಮತ್ತು ಕನಿಷ್ಠ ಮೂವರು ಅಸ್ವಸ್ಥರಾಗಿದ್ದಾರೆ ಎಂದು ವಿಶ್ವ ಆರೋಗ್ಯ ಸಂಸ್ಥೆ ಮತ್ತು ದಕ್ಷಿಣ ಆಫ್ರಿಕಾದ ಆರೋಗ್ಯ ಇಲಾಖೆ ತಿಳಿಸಿದೆ.**

ಅಸೋಸಿಯೇಟೆಡ್ ಪ್ರೆಸ್‌ಗೆ ನೀಡಿದ ಹೇಳಿಕೆಯಲ್ಲಿ, ತನಿಖೆ ನಡೆಯುತ್ತಿದೆ ಆದರೆ ಕನಿಷ್ಠ ಒಂದು ಹ್ಯಾಂಟವೈರಸ್ ಪ್ರಕರಣ ದೃಢಪಟ್ಟಿದೆ ಎಂದು ಹೇಳಿದೆ. ರೋಗಿಗಳಲ್ಲಿ ಒಬ್ಬರು ದಕ್ಷಿಣ ಆಫ್ರಿಕಾದ ಆಸ್ಪತ್ರೆಯಲ್ಲಿ ತೀವ್ರ ನಿಗಾ ಘಟಕದಲ್ಲಿದ್ದಾರೆ ಎಂದು ಆರೋಗ್ಯ ಸಂಸ್ಥೆ ತಿಳಿಸಿದೆ ಮತ್ತು ರೋಗಲಕ್ಷಣಗಳೊಂದಿಗೆ ಇನ್ನಿಬ್ಬರನ್ನು ಹಡಗಿನಿಂದ ಸ್ಥಳಾಂತರಿಸಲು ಅಧಿಕಾರಿಗಳೊಂದಿಗೆ ಕೆಲಸ ಮಾಡುತ್ತಿದೆ. ಕ್ರೂಸ್ ಅನ್ನು ನಿರ್ವಹಿಸುವ ಡಚ್ ಕಂಪನಿಯು ಹಡಗು ಈಗ ಆಫ್ರಿಕಾದ ಪಶ್ಚಿಮ



ಕರಾವಳಿಯ ದ್ವೀಪ ರಾಷ್ಟ್ರವಾದ ಕೇಪ್ ವರ್ಡೆ ಕರಾವಳಿಯಲ್ಲಿದೆ ಮತ್ತು ಸ್ಥಳೀಯ ಅಧಿಕಾರಿಗಳು ಸಹಾಯ ಮಾಡುತ್ತಿದ್ದಾರೆ ಆದರೆ ಯಾರನ್ನೂ ಇಳಿಯಲು ಅನುಮತಿಸಲಿಲ್ಲ ಎಂದು ಹೇಳಿದೆ.

ತುರ್ತು ವೈದ್ಯಕೀಯ ಆರೈಕೆಯ ಅಗತ್ಯವಿರುವ ಹಡಗಿನಲ್ಲಿರುವ ಇಬ್ಬರು ಅಸ್ವಸ್ಥರು ಸಿಬ್ಬಂದಿ ಸದಸ್ಯರಾಗಿದ್ದರು ಎಂದು ಅದು ಹೇಳಿದೆ.ಹ್ಯಾಂಟವೈರಸ್ ಸೋಂಕುಗಳು ಮುಖ್ಯವಾಗಿ ದಂಶಕಗಳಿಂದ ಹರಡುತ್ತವೆ. ಪ್ರಪಂಚದಾದ್ಯಂತ ಕಂಡುಬರುವ ಹ್ಯಾಂಟವೈರಸ್‌ಗಳು, ಇಲಿಗಳು ಮತ್ತು ಇಲಿಗಳಂತಹ ಸೋಂಕಿತ ದಂಶಕಗಳ ಮೂತ್ರ ಅಥವಾ ಮಲದ ಸಂಪರ್ಕದಿಂದ ಹರಡುವ ವೈರಸ್‌ಗಳ ಕುಟುಂಬವಾಗಿದೆ. ಕಳೆದ ವರ್ಷ ನ್ಯೂ ಮೆಕ್ಸಿಕೋದಲ್ಲಿ ದಿವಂಗತ ನಟ ಜೀನ್ ಹ್ಯಾಕ್‌ಮನ್ ಅವರ ಪತ್ನಿ ಬೆಟ್ಸಿ ಅರಕಾವಾ ಹ್ಯಾಂಟವೈರಸ್ ಸೋಂಕಿನಿಂದ ನಿಧನರಾದ ನಂತರ ಅವು ಗಮನ ಸೆಳೆದವು.

ಹ್ಯಾಂಟಮನ್ ಸುಮಾರು ಒಂದು ವಾರದ ನಂತರ ತಮ್ಮ ಮನೆಯಲ್ಲಿ ಹೃದಯ ಕಾಯಿಲೆಯಿಂದ ನಿಧನರಾದರು.ಹ್ಯಾಂಟವೈರಸ್‌ಗಳು ಎರಡು ಗಂಭೀರ ರೋಗಲಕ್ಷಣಗಳನ್ನು ಉಂಟುಮಾಡುತ್ತವೆ ಎಂದು ಯುಎಸ್ ಸೆಂಟರ್ಸ್ ಫಾರ್ ಡಿಸೀಸ್ ಕಂಟ್ರೋಲ್ ಅಂಡ್ ಪ್ರಿವೆನ್ಷನ್ ತಿಳಿಸಿದೆ. ಹ್ಯಾಂಟವೈರಸ್ ಪಲ್ಮನರಿ ಸಿಂಡ್ರೋಮ್, ಶ್ವಾಸಕೋಶದ ಮೇಲೆ ಪರಿಣಾಮ ಬೀರುವ ತೀವ್ರ ಕಾಯಿಲೆ ಮತ್ತು ಮೂತ್ರಪಿಂಡದ ಸಿಂಡ್ರೋಮ್‌ನೊಂದಿಗೆ ರಕ್ತಸ್ರಾವದ ಜ್ವರ, ಮೂತ್ರಪಿಂಡಗಳ ಮೇಲೆ ಪರಿಣಾಮ ಬೀರುವ ತೀವ್ರ ಕಾಯಿಲೆ.ಅಪರೂಪವಾಗಿದ್ದರೂ, ಹ್ಯಾಂಟವೈರಸ್ ಸೋಂಕುಗಳು ಜನರ ನಡುವೆ ಹರಡಬಹುದು ಎಂದು ಹೇಳಿದೆ. ನಿರ್ದಿಷ್ಟ ಚಿಕಿತ್ಸೆ ಅಥವಾ ಚಿಕಿತ್ಸೆ ಇಲ್ಲ, ಆದರೆ ಆರಂಭಿಕ ವೈದ್ಯಕೀಯ ಗಮನವು ಬದುಕುಳಿಯುವ ಸಾಧ್ಯತೆಯನ್ನು ಹೆಚ್ಚಿಸುತ್ತದೆ.ಅಟ್ಲಾಂಟಿಕ್ ಸಾಗರದಲ್ಲಿ ಕ್ರೂಸ್ ಹಡಗಿನಲ್ಲಿ ನೌಕಾಯಾನ ಮಾಡುವ ಸಾರ್ವಜನಿಕ ಆರೋಗ್ಯ ಕಾರ್ಯಕ್ರಮದ ಬಗ್ಗೆ ತಿಳಿದಿದೆ ಮತ್ತು ಬೆಂಬಲಿಸುತ್ತದೆ ಎಂದು ಸಂಸ್ಥೆ ಹೇಳಿದೆ.

ವಿವರವಾದ ತನಿಖೆಗಳು ನಡೆಯುತ್ತಿವೆ, ಇದರಲ್ಲಿ ಹೆಚ್ಚಿನ ಪ್ರಯೋಗಾಲಯ ಪರೀಕ್ಷೆಗಳು ಮತ್ತು ಸಾಂಕ್ರಾಮಿಕ ರೋಗಶಾಸ್ತ್ರೀಯ ತನಿಖೆಗಳು ಸೇರಿವೆ. ಪ್ರಯಾಣಿಕರು ಮತ್ತು ಸಿಬ್ಬಂದಿಗೆ ವೈದ್ಯಕೀಯ ಆರೈಕೆ ಮತ್ತು ಬೆಂಬಲವನ್ನು ನೀಡಲಾಗುತ್ತಿದೆ. ಸೇಂಟ್ ಹೆಲೆನಾದಿಂದ ಹೊರಟು ದಕ್ಷಿಣ ಆಫ್ರಿಕಾಕ್ಕೆ ಹಡಗು ವರ್ಗಾಯಿಸಲ್ಪಟ್ಟ ನಂತರ, ಅಟ್ಲಾಂಟಿಕ್‌ನಲ್ಲಿರುವ ಮತ್ತೊಂದು ದೂರದ ದ್ವೀಪವಾದ ಅಸೆನ್ಶನ್ ದ್ವೀಪದ ಬಳಿ ಆ ವ್ಯಕ್ತಿ ಅಸ್ವಸ್ಥನಾಗಿದ್ದನು ಎಂದು ಅದು ಹೇಳಿದೆ. ಈ ಸಮಯದಲ್ಲಿ ಸುಮಾರು 150 ಪ್ರವಾಸಿಗರು ಹಡಗಿನಲ್ಲಿದ್ದರು ಎಂದು ದಕ್ಷಿಣ ಆಫ್ರಿಕಾದ ಆರೋಗ್ಯ ಇಲಾಖೆ ತಿಳಿಸಿದೆ. ವಿಶೇಷ ಧ್ರುವ ಕ್ರೂಸ್ ಹಡಗು ಎಂದು ವಿವರಿಸಲಾದ ಹೊಂಡಿಯಸ್ ಸಾಮಾನ್ಯವಾಗಿ ಸುಮಾರು 70 ಸಿಬ್ಬಂದಿಗಳೊಂದಿಗೆ ಪ್ರಯಾಣಿಸುತ್ತದೆ ಎಂದು ಹಲವಾರು ಆನ್‌ಲೈನ್ ಪ್ರವಾಸ ನಿರ್ವಾಹಕರು ತಿಳಿಸಿದ್ದಾರೆ.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101 KARNATAKA, EDITOR BY: IRFAN K PH NO.